ಸಂಪುಟ : 10 ಸಂಚಿಕೆ: 259 ಪುಟ : 4+2 ಬೆಲೆ: 3.00 ಗುರುವಾರ ನವೆಂಬರ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 259 Pages : 4+2 Price : 3.00 Thursday November 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗೃಹ ಲಕ್ಷ್ಮೀ ಫಲಾನುಭವಿಗಳು NPCI ಲಿಂಕ್ ಮಾಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

2,000 ರೂ. ಜಮಾ ಆಗದ ಗೃಹ ಲಕ್ಷ್ಮೀ ಫಲಾನುಭವಿಗಳು ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ NPCI ಲಿಂಕ್ ಮಾಡಿಸಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹ ಲಕ್ಷ್ಮೀ ಫಲಾನುಭವಿಗಳಿಗೆ 2,000 ರೂ. ಬ್ಯಾಂಕ್ ಖಾತೆಗೆ ಜಮಾ ಆಗದೇ ಇರುವ ಫಲಾನುಭವಿಗಳು ತಮ್ಮ ಪಾಸ್ ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ತೆಗೆದುಕೊಂಡು ತಮ್ಮ ಖಾತೆ ಇರುವ ಬ್ಯಾಂಕ್ ಇಲ್ಲವೇ ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು.

ಮಾಹಿತಿಗಾಗಿ ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿಗಿನ ಉಪವಿಭಾಗೀಯ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಕಚೇರಿ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಬಾಂಗ್ಲಾದೇಶಕ್ಕೆ ಗಡಿಪಾರು ಮಾಡಿರುವ 6 ಮಂದಿಯನ್ನು ವಾಪಸ್ ಕರೆತನ್ನಿ : ಕೇಂದ್ರಕ್ಕೆ ಸುಪ್ರೀಂ ಕೋರ್ಟ್ ಆದೇಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಿದೇಶಿಯರೆಂದು ಶಂಕಿಸಿ ಬಾಂಗ್ಲಾದೇಶಕ್ಕೆ ಗಡಿಪಾರು ಮಾಡಲಾಗಿರುವ ಪಶ್ಚಿಮ ಬಂಗಾಳದ ಆರು ನಿವಾಸಿಗಳನ್ನು ತಾತ್ಕಾಲಿಕ ಕ್ರಮವಾಗಿ ವಾಪಸ್ ಕರೆತರುವಂತೆ ಸುಪ್ರೀಂ ಕೋರ್ಟ್ ಮಂಗಳವಾರ (ನವೆಂಬರ್ 25) ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ.

ಗಡಿಪಾರು ಮಾಡುವಾಗ ತುಂಬು ಗರ್ಭಿಣಿಯಾಗಿದ್ದ ಸುನಾಲಿ ಖಾತೂನ್, ಆಕೆಯ ಗಂಡ ದಾನಿಷ್ ಶೇಖ್, ಮಗ ಶಬೀರ್ (ಇವರು ಪ್ರಕರಣದ ಅರ್ಜಿದಾರ ಭೋದು ಶೇಖ್ ಎಂಬವರ ಕುಟುಂಬಸ್ಥರು) ಮತ್ತು ಸ್ವೀಟಿ ಬೀಬಿ ಎಂಬ ಮಹಿಳೆ, ಆಕೆಯ ಇಬ್ಬರು ಮಕ್ಕಳಾದ ಕುರ್ಬಾನ್ ಶೇಖ್ ಮತ್ತು ಇಮಾಮ್ ದೇವಾನ್ ಇವರನ್ನು ವಾಪಸ್ ಕರೆತರಲು ಕೋರ್ಟ್ ನಿರ್ದೇಶಿಸಿದೆ.

ಗಡಿಪಾರಾದವರು ತಾವು ಭಾರತೀಯ ನಾಗರಿಕರು ಎಂದು ಹೇಳಿಕೊಳ್ಳುತ್ತಿದ್ದು, ಹಾಗಾಗಿ ಅವರು ತಮ್ಮಲ್ಲಿರುವ ದಾಖಲೆಗಳನ್ನು ಸಲ್ಲಿಸಿ ಸಂಬಂಧಿತ ಅಧಿಕಾರಿಗಳ ಮುಂದೆ ತಮ್ಮ ವಾದ ಮಂಡಿಸುವ ಹಕ್ಕನ್ನು ಹೊಂದಿದ್ದಾರೆ ಎಂದು ಅಭಿಪ್ರಾಯಪಟ್ಟ ಸುಪ್ರೀಂ ಕೋರ್ಟ್, ಸರ್ಕಾರ ಮಧ್ಯಂತರ ಕ್ರಮವಾಗಿ ಅವರನ್ನು ಮರಳಿ ಕರೆತಂದು ವಿಚಾರಣೆಗೆ ಅವಕಾಶ ನೀಡಬೇಕು ಎಂದು ಹೇಳಿದೆ. ಸರ್ಕಾರಿ ಸಂಸ್ಥೆಗಳು ಗಡಿಪಾರು ಮಾಡಿದವರ ದಾಖಲೆಗಳ ನೈಜತೆಯನ್ನು ಪರಿಶೀಲಿಸಬಹುದು ಎಂದಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠವು ಪ್ರಕರಣ ವಿಚಾರಣೆ ನಡೆಸಿದೆ.

### ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ

# ಸಂವಿಧಾನ ದೇಶದ ನಾಗರಿಕರ ರಕ್ಷಣೆ ಮಾಡುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಭದ್ರವಾಗಿಸಲು ಎಲ್ಲರೂ ನಮ್ಮ ದೇಶದ ಸಂವಿಧಾನ ಓದಿ ಅರ್ಥ ಮಾಡಿಕೊಳ್ಳಬೇಕು. ಜಗತ್ತಿನಲ್ಲೇ ನಮ್ಮ ದೇಶದ ಸಂವಿಧಾನ ಶ್ರೇಷ್ಠವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ವತಿಯಿಂದ ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಭಾರತ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಭಾರತೀಯರ ಬದುಕಿನ ಅವಿಭಾಜ್ಯ ಅಂಗವಾಗಿದೆ. ಸಂವಿಧಾನದ ಆಶಯಗಳಿಗನುಗುಣವಾಗಿ ಎಲ್ಲರೂ ಬದುಕು ಕಟ್ಟಿಕೊಳ್ಳಬೇಕು. ಸಂವಿಧಾನ ಭಾರತೀಯ ನಾಗರಿಕರ ರಕ್ಷಣೆ ಮಾಡುತ್ತಿದೆ. ಅದರಂತೆ ನಾವು ಸಹ ಮುಂದಿನ ಪೀಳಿಗೆಗೆ ಸಂವಿಧಾನದ ಆಶಯ, ಮಹತ್ವವನ್ನು ಸಾರುವ ಮೂಲಕ ಸಂವಿಧಾನವನ್ನು ರಕ್ಷಣೆ ಮಾಡಬೇಕು ಎಂದರು.

ಭಾರತ ದೇಶಕ್ಕೆ ಸಂವಿಧಾನವನ್ನು ರಚಿಸಲು ಅನೇಕರ ಶ್ರಮವಿದೆ. ಡಾ. ಬಿ.ಆರ್. ಅಂಬೇಡ್ಕರ್ ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷತೆ ವಹಿಸಿ ಪ್ರಪಂಚದ ಎಲ್ಲಾ



ಸಂವಿಧಾನಗಳನ್ನು ಅಧ್ಯಯನ ಮಾಡಿ ನಮ್ಮ ದೇಶದ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗೆ ಹೊಂದುವಂತೆ ಒಂದು ಸಮಗ್ರವಾದ ಸಂವಿಧಾನವನ್ನು ಸಿದ್ಧಪಡಿಸಿದ್ದಾರೆ. ನಮ್ಮ ಮೂಲಭೂತ ಹಕ್ಕುಗಳನ್ನು ಕೇಳುವುದರ ಜೊತೆಗೆ ಮೂಲಭೂತ ಕರ್ತವ್ಯಗಳನ್ನು ನಿಭಾಯಿಸೋಣ ಎಂದು ಕರೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಡಾ. ಅಂಬೇಡ್ಕರ್ ರಚಿಸಿದ ಸಂವಿಧಾನ ಅರಿತರೆ ಎಲ್ಲರೂ ಸಂವಿಧಾನವನ್ನು ಗೌರವದಿಂದ ಕಾಣುತ್ತಾರೆ. ಸಂವಿಧಾನ ಆಶಯಕ್ಕೆ ಅನುಗುಣವಾಗಿ ನಾವೆಲ್ಲರೂ ಮುನ್ನಡೆಯೋಣ ಎಂದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ನೆರೆದಿದ್ದ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ಸಂವಿಧಾನ ಪ್ರತಿಜ್ಞಾ ವಿಧಿ ಬೋಧಿಸಿದರು.

ಹುಲಕೋಟಿ ಜಿಸಿಟಿಎಂ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಡಾ. ಅರ್ಜುನ ಗೊಳಸಂಗಿ ಉಪನ್ಯಾಸ ನೀಡಿ, ಭಾರತೀಯ ಸಂವಿಧಾನದಲ್ಲಿ 395 ಅನುಚ್ಛೇದಗಳು, 28 ಭಾಗಗಳು ಹಾಗೂ 8 ಷೆಡ್ಯೂಲ್‌ಗಳು ಇವೆ. ವಿಶ್ವದಲ್ಲೇ ಅತಿ ದೊಡ್ಡ ಲಿಖಿತ ಸಂವಿಧಾನವಾಗಿ ಭಾರತ ಸಂವಿಧಾನವಿದೆ. ಇದರ ಸಂಪೂರ್ಣ ರಚನೆಯ ಜವಾಬ್ದಾರಿ ಡಾ. ಬಿ.ಆರ್. ಅಂಬೇಡ್ಕರ್ ಅವರದ್ದಾಗಿತ್ತು. ಹಾಗಾಗಿಯೇ ಅವರನ್ನು ಭಾರತ ಸಂವಿಧಾನದ ಪಿತಾಮಹ ಎಂದು ಕರೆಯಲಾಗುತ್ತದೆ ಎಂದರು.

> ಸಂವಿಧಾನ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ವತಿಯಿಂದ ನಗರಸಭೆ ಆವರಣದಿಂದ ಜಿಲ್ಲಾಡಳಿತ ಭವನದವರೆಗೆ ಮೆರವಣಿಗೆ ಆಯೋಜಿಸಲಾಗಿತ್ತು. ಮೆರವಣಿಗೆಗೆ ವಿ.ಪ ಸದಸ್ಯ ಎಸ್.ವಿ. ಸಂಕನೂರ ಚಾಲನೆ ನೀಡಿದರು. ಈ ವೇಳೆ ಕೃಷ್ಣಗೌಡ ಪಾಟೀಲ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಬಸವರಾಜ ಕಡೆಮನಿ, ಮುರ್ತುಜಾ ಖಾದ್ರಿ, ನಂದಾ ಹಣಬರಟ್ಟಿ, ಡಾ. ಬಸವರಾಜ ಬಳ್ಳಾರಿ, ಗಂಗಪ್ಪ ಎಂ ಇದ್ದರು.

ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ ನಿರ್ವಹಿಸಿದರು.

ವೇದಿಕೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಡಿವೈಎಸ್ಪಿ ವಿದ್ಯಾನಂದ ನಾಯ್ಕ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಾ. ಬಸವರಾಜ ಬಳ್ಳಾರಿ, ಡಾ. ಎಸ್.ಎಸ್. ನೀಲಗುಂದ, ಆರ್.ಎಸ್. ಬುರಡಿ, ರಾಜಾರಾಮ ಪವಾರ ಇದ್ದರು.

### ಸಂವಿಧಾನ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿದ ಸಭಾಪತಿ ಬಸವರಾಜ ಹೊರಟ್ಟಿ

# ಸಂವಿಧಾನ ನಮ್ಮ ದೇಶದ ಆತ್ಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಶ್ವದಲ್ಲೇ ಅತ್ಯಂತ ಶ್ರೇಷ್ಠವಾದ ಲಿಖಿತ ಸಂವಿಧಾನ ನಮ್ಮದು. ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ತಳಹದಿಯ ಮೇಲೆ ನಮ್ಮ ಸಂವಿಧಾನ ರಚನೆಯಾಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಕರ್ನಾಟಕ ವಿದ್ಯಾವರ್ಧಕ ಸಂಘ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯು ಸಂಯುಕ್ತವಾಗಿ ಆಯೋಜಿಸಿದ್ದ ಸಂವಿಧಾನ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ಉಳಿಯಬೇಕಾದರೆ ಪ್ರತಿಯೊಬ್ಬ ಪ್ರಜೆಯೂ ಸಂವಿಧಾನದ ಆಶಯಗಳನ್ನು ಅರಿತುಕೊಳ್ಳಬೇಕು. ದೇಶದ ಐಕ್ಯತೆ ಮತ್ತು ಸಮಗ್ರತೆಯನ್ನು ಕಾಪಾಡುವುದು ನಮ್ಮೆಲ್ಲರ ಹೊಣೆ. ನಮ್ಮ ಸಂವಿಧಾನವು ಕೇವಲ ಕಾನೂನಿನ ಪುಸ್ತಕವಲ್ಲ. ಅದು ನಮ್ಮ ದೇಶದ ಆತ್ಮವಾಗಿದೆ. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಜೊತೆಗೆ ಸಂವಿಧಾನ ವಿಧಿಸಿರುವ ಮೂಲಭೂತ ಕರ್ತವ್ಯಗಳನ್ನು ಪಾಲಿಸುವ ಜವಾಬ್ದಾರಿಯು ಎಲ್ಲರ ಮೇಲಿದೆ ಎಂದು ಅವರು ತಿಳಿಸಿದರು.




ಶಾಸಕ ಎನ್.ಎಚ್. ಕೋನರೆಡ್ಡಿ ಮಾತನಾಡಿ, ಡಾ. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ನಾಯಕರಲ್ಲ. ಅವರು ಇಡೀ ಮನುಕುಲದ ವಿಮೋಚಕರು. ಅವರ ವೈಚಾರಿಕ ನಿಲುವುಗಳು ಮತ್ತು ಸಮಾನತೆಯ ತತ್ವಗಳನ್ನು ಅಳವಡಿಸಿಕೊಂಡರೆ ಮಾತ್ರ ನಾವು ನಿಜವಾದ ಪ್ರಜಾಪ್ರಭುತ್ವ ಮತ್ತು ಜಾತ್ಯತೀತ ರಾಷ್ಟ್ರವನ್ನು ಕಟ್ಟಲು ಸಾಧ್ಯ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಲು ಮತ್ತು ಜವಾಬ್ದಾರಿಯುತ ಪ್ರಜೆಗಳಾಗಿ ರೂಪುಗೊಳ್ಳಲು ವಿದ್ಯಾರ್ಥಿಗಳು ಸಂವಿಧಾನವನ್ನು ಓದುವುದು ಮತ್ತು ಅರ್ಥಮಾಡಿಕೊಳ್ಳುವುದು ಅವಶ್ಯ ಎಂದು ಹೇಳಿದರು.

> ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಸಂವಿಧಾನ ಜಾಗೃತಿ ಜಾಥಾ ನಡಿಗೆಯು ಕೋರ್ಟ್ ಸರ್ಕಲ್, ಆಲೂರು ವೆಂಕಟರಾವ್ ವೃತ್ತ (ಜುಬ್ಲಿ ಸರ್ಕಲ್) ಮಾರ್ಗವಾಗಿ ಡಾ. ಪಾಟೀಲ ಪುಟ್ಟಪ್ಪ ಸಭಾಭವನದವರೆಗೆ ಸಾಗಿತು. ಜಾಥಾ ಕಾರ್ಯಕ್ರಮಕ್ಕೆ ಕರ್ನಾಟಕ ವಿಧಾನ ಪರಿಷತ್ ಸದಸ್ಯ, ಸರ್ಕಾರದ ಮುಖ್ಯ ಸಂಚೇತಕ ಸಲೀಂ ಅಹ್ಮದ ಚಾಲನೆ ನೀಡಿದರು.

ಕೆ.ಯು.ಎಸ್.ಕೆ. ಕಾನೂನು ಮಹಾವಿದ್ಯಾಲಯ ಪ್ರಾಧ್ಯಾಪಕಿ ಹಾಗೂ ಪ್ರಾಂಶುಪಾಲರಾದ ಡಾ. ಮಂಜುಳಾ ಎಸ್.ಆರ್ ಅವರು ಸಂವಿಧಾನ ಆಚರಣೆಯ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿ.ಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರು ಇದ್ದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭಾ ಸ್ವಾಗತಿಸಿ, ಸಂವಿಧಾನ ಪಿಠೀಕೆಯನ್ನು ಬೋಧಿಸಿದರು. ಶಿಕ್ಷಕ ಪ್ರವೀಣ ಮಸಗಿ ನಿರೂಪಸಿದರು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಶಾಲಾ ಮಕ್ಕಳು, ಸಾರ್ವಜನಿಕರು ಭಾಗವಹಿಸಿದ್ದರು.

### ಮನುಕುಲದ ಮಹಾದಾನಿಗೆ ಸಚಿವರಿಂದಲೇ ಸನ್ಮಾನ । ಸೇವೆ, ತ್ಯಾಗದ ಅಪರೂಪದ ಸಂಗಮ

# ವನ್ನಾಲರ ತ್ಯಾಗಕ್ಕೆ ಸಮಾಜ ಋಣಿಯಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನೆಲದಲ್ಲಿ ನಡೆದ ನಾರಾಯಣ ವನ್ನಾಲ ಅವರ ಅಂಗಾಂಗ ದಾನದ ಘಟನೆ ಕೇವಲ ವೈದ್ಯಕೀಯ ಕ್ಷೇತ್ರದ ಯಶಸ್ಸು ಮಾತ್ರವಲ್ಲ, ಅದು ಮಾನವೀಯ ಮೌಲ್ಯಗಳ ಮರು ಸ್ಥಾಪನೆಯಾಗಿ ಗದಗ ಜಿಲ್ಲೆಯಲ್ಲಿ ದಾಖಲೆಯಾಗಿ ಉಳಿದಿದೆ. ದುಃಖಭರಿತ ಕುಟುಂಬವೇ ತಮ್ಮ ದುಃಖವನ್ನೆಲ್ಲಾ ಮರೆತು, ನಾಲ್ಕು ಜೀವಗಳಿಗೆ ಹೊಸ ಆಶಾಕಿರಣ ನೀಡಿದ ತ್ಯಾಗವು, ಸಮಾಜ ಮತ್ತು ಸರ್ಕಾರ ಹೇಗೆ ಪ್ರತಿಕ್ರಿಯಿಸಬೇಕು ಎಂಬುದಕ್ಕೆ ಒಂದು ಆದರ್ಶಪ್ರಾಯ ಘಟನೆಯಾಗಿ ಹೊರಹೊಮ್ಮಿದೆ.

ಕಾನೂನು ಸಚಿವ ಎಚ್.ಕೆ. ಪಾಟೀಲರು ಈ ಘಟನೆಯ ಮಹತ್ವವನ್ನು ತಕ್ಷಣ ಅರಿತು ಅಂಗಾಗ ದಾನ ಮಾಡಿದವರ ಮನೆಗೆ ತೆರಳಿ ವಿಶೇಷ ಸಮಾಧಾನ ಹೇಳಿದ್ದಾರೆ. ಸಾಮಾನ್ಯವಾಗಿ



ಇಂತಹ ಸನ್ಮಾನಗಳು ಸಾರ್ವಜನಿಕ ವೇದಿಕೆಗಳಲ್ಲಿ ನಡೆಯುತ್ತವೆ. ಆದ-ರೆ, ನೋವಿನಲ್ಲಿ ಮುಳುಗಿರುವ ವನ್ನಾಲ ಕುಟುಂಬದವರು ವೇದಿಕೆಗೆ ಬರುವುದು ಅವರಿಗೆ ಇನ್ನಷ್ಟು ಕಷ್ಟ ನೀಡಬಹುದು ಎಂದು ಮನಗಂಡ ಸಚಿವರು, ತಾವೇ ಖುದ್ದಾಗಿ ವನ್ನಾಲ ಅವರ ಮನೆಗೆ ತೆರಳುವ ಅಪರೂಪದ ಮತ್ತು ಅತ್ಯಂತ ಸಂವೇದನಾಶೀಲ ನಿರ್ಧಾರ ಕೈಗೊಂಡರು.

ನಾಲ್ಕು ಜೀವಗಳಿಗೆ ಹೊಸ ಜೀವನ ನೀಡಿದ ಕುಟುಂಬದ ಮುಂದೆ ನಮ್ಮ ಗೌರವ ಅತಿ ಸಣ್ಣದು. ಆದರೆ, ಅವರ ತ್ಯಾಗ-ಕ್ಕೆ ಪ್ರತಿಯಾಗಿ ಇಡೀ ಸಮಾಜ ಅವರಿಗೆ ಋಣಿಯಾಗಿದೆ ಎಂಬ ಭಾವನೆಯೊಂದಿಗೆ ಸಚಿವರು, ವನ್ನಾಲ ಅವರ ಪತ್ನಿ, ತಂದೆ ಮತ್ತು ತಾಯಿ ಅವರಿಗೆ ಗೌರವ ಸಲ್ಲಿಸಿ, ಸಾಂತ್ವನ ಹೇಳಿದರು. ರಾಜಕೀಯ ನಾಯಕರೊಬ್ಬರು ಅಧಿಕಾರದ ಚೌಕಟ್ಟನ್ನು ಮೀರಿ, ಕಣ್ಣೀರಿನಲ್ಲಿ ಕೈತೊಳೆಯುತ್ತಿರುವ ಕುಟುಂಬದ ಮನೆಬಾಗಿಲಿಗೆ ಹೋಗಿ ಕೃತಜ್ಞತೆ ಸಲ್ಲಿಸಿದ್ದು, ಸಚಿವ ಎಚ್.ಕೆ. ಪಾಟೀಲರ ಸಂವೇದನಾಶೀಲ ಆಡಳಿತ ಮತ್ತು ಜನಪರ ಕಾಳಜಿಯ ಪ್ರತೀಕವಾಗಿ ನಿಂತಿದೆ. ಅವರ ಈ ನಡೆ, ಕುಟುಂಬದ ದುಃಖಕ್ಕೆ ಸ್ವಲ್ಪ ಮಟ್ಟಿಗಿನ ನೆಮ್ಮದಿಯನ್ನು ನೀಡಿದೆ.

ಈ ಮಹತ್ತರ ಕಾರ್ಯ ಯಶಸ್ವಿಯಾಗಲು ಕೆ.ಎಚ್. ಪಾಟೀಲ ಆಸ್ಪತ್ರೆಯ ವೈದ್ಯರ ತಂಡ ಮತ್ತು ಸಚಿವರ ಸೇವಾ ತಂಡದ ಸಮನ್ವಯ ಶ್ರಮ ಅಗಾಧ. ಡಾ. ಅವಿನಾಶ ಓದುಗೌಡರ ನೇತೃತ್ವದ ವೈದ್ಯಕೀಯ ತಂಡವು, ಸಕಾಲದಲ್ಲಿ ಅಂಗಾಂಗಗಳನ್ನು ಪಡೆದು, ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಿರ್ವಹಿಸಿತು. ಕಿಡ್ನಿ ಟ್ರಾನ್ಸ್‌ಪ್ಲಾಂಟ್ ವಿಭಾಗದ ಡಾ. ಭುವನೇಶ ಆರಾಧ್ಯ, ಡಾ. ಪವನ ಕೋಳಿವಾಡ, ಡಾ. ದೀಪಕ ಕುರಹಟ್ಟಿ, ಡಾ. ನಿಯಾಜ್, ಡಾ. ವಿನಾಯಕ ಪಂಚಗಾರ ಸೇರಿದಂತೆ ಸಂಪೂರ್ಣ ತಂಡವು ಗಡಿಯಾರದ ಮುಳ್ಳಿನೊಂದಿಗೆ ಸ್ಪಂದಿಸಿ ಕಾರ್ಯ ನಿರ್ವಹಿಸಿದ್ದು, ಅವರ ವೃತ್ತಿಪರ ಬದ್ಧತೆಯನ್ನು ಸಚಿವ ಪಾಟೀಲರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

ಅಂಗಾಂಗಗಳನ್ನು ಒಂದು ಆಸ್ಪತ್ರೆಯಿಂದ ಮತ್ತೊಂದು ಆಸ್ಪತ್ರೆಗೆ ಶೀಘ್ರವಾಗಿ ತಲುಪಿಸಲು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಎಸ್ಪಿ ರೋಹನ್ ಜಗದೀಶ ಅವರು ಗ್ರೀನ್ ಕಾರಿಡಾರ್ (ಸಂಚಾರ ಮುಕ್ತ ದಾರಿ) ಏರ್ಪಾಡು ಮಾಡಿದ್ದು, ಸರ್ಕಾರಿ ಇಲಾಖೆಗಳು ಮಾನವೀಯ ಉದ್ದೇಶಕ್ಕಾಗಿ ಹೇಗೆ ಒಗ್ಗೂಡಬಹುದು ಎಂಬುದನ್ನು ಕೂಡಾ ಸಚಿವ ಎಚ್.ಕೆ. ಪಾಟೀಲರು ಈ ಪ್ರಕರಣದಲ್ಲಿ ತೋರಿಸಿಕೊಟ್ಟಿದ್ದಾರೆ.


ಈ ಅಪರೂಪದ ಸಂದರ್ಭದಲ್ಲಿ ಎಂ.ಆರ್. ಪಾಟೀಲ, ಡಾ. ಎಸ್.ಆರ್. ನಾಗನೂರ, ಡಾ. ಪ್ಯಾರಾಅಲಿ ನೂರಾನಿ, ಡಾ. ಪ್ರಭು ಮಡಿವಾಳರ, ಡಾ. ವಿಶಾಲ ಕಪ್ಪನವರ, ಎಚ್.ಕೆ. ಪಾಟೀಲ ಸೇವಾ ತಂಡದ ಅಧ್ಯಕ್ಷ ಪ್ರಭು ಬುರಬುರೆ, ರಂಗಣ್ಣ ಓದುಗೌಡ್ರ, ಡಾ. ವೇಮನ ಸಾಹುಕಾರ, ಅಶೋಕ ಮಂದಾಲಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದು, ವನ್ನಾಲ ಕುಟುಂಬದ ಸಾಮಾಜಿಕ ಪ್ರೀತಿಯನ್ನು, ಅದಕ್ಕಾಗಿ ಆ ಕುಟಂಬದ ತ್ಯಾಗವನ್ನು ಸ್ಮರಿಸಿದರು.

> ನಾರಾಯಣ ವನ್ನಾಲ ಅವರು ದಾನದ ಮೂಲಕ ನಾಲ್ಕು ಜೀವಗಳಲ್ಲಿ ಜೀವಂತವಾಗಿದ್ದಾರೆ. ಅವರ ಕುಟುಂಬದವರ ಈ ತ್ಯಾಗವು ಗದಗ ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿದೆ. ಈ ಘಟನೆಯಿಂದ ಪ್ರೇರಿತರಾದ ಗದಗ-ಬೆಟಗೇರಿಯ ಹಿರಿಯ ವೈದ್ಯರೆಲ್ಲರೂ ಒಗ್ಗೂಡಿ, ಇನ್ನು ಮುಂದೆ ಪ್ರತಿಯೊಂದು ಬ್ರೇನ್ ಡೆಡ್ ಪ್ರಕರಣದಲ್ಲೂ ಕುಟುಂಬಸ್ಥರನ್ನು ಮನವೊಲಿಸಿ ಅಂಗಾಂಗ ದಾನಕ್ಕೆ ಪ್ರೋತ್ಸಾಹಿಸಲು ಸಂಕಲ್ಪ ಮಾಡಿದ್ದಾರೆ. ವೈದ್ಯರು ಎದುರಿಸುತ್ತಿರುವ ಸವಾಲುಗಳನ್ನು ನಿವಾರಿಸಲು ಮತ್ತು ಐಸಿಯುಗಳ ಮುಂದೆ ಜಾಗೃತಿ ಭಿತ್ತಿ ಪತ್ರಗಳನ್ನು ಅಳವಡಿಸಲು ಚರ್ಚಿಸಿರುವುದು, ಈ ಮಹಾನ್ ತ್ಯಾಗದ ಫಲವಾಗಿ ಒಂದು ಸಮಗ್ರ ಬದಲಾವಣೆಯ ಅಲೆ ಆರಂಭವಾಗಿದೆ ಎಂಬುದಕ್ಕೆ ಸಾಕ್ಷಿಯಾಗಿದೆ.

> ನಾರಾಯಣ ವನ್ನಾಲ ಅವರು ನಾಲ್ಕು ಜನರಿಗೆ ಬದುಕು ನೀಡಿದ್ದಾರೆ. ಕುಟುಂಬದವರ ಉದಾತ್ತ ನಿರ್ಧಾರ ಅಭಿನಂದನೀಯ. ಆಸ್ಪತ್ರೆಯ ವೈದ್ಯರು, ಸಿಬ್ಬಂದಿ ವರ್ಗ ಹಾಗೂ ಅಧಿಕಾರಿಗಳ ನಿರಂತರ ಶ್ರಮದಿಂದ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಪ್ರೇರಣೆಯಿಂದ ಸಾಧ್ಯವಾಗಿದೆ.
>
> **– ಡಾ. ಎಸ್.ಆರ್. ನಾಗನೂರ.**
> **ಹುಲಕೋಟಿ ರೂರಲ್ ಮೆಡಿಕಲ್ ಸಂಸ್ಥೆ.**

> ಆಸ್ಪತ್ರೆಗೆ ಆಗಮಿಸಿ, ಮರಣದ ನಂತರ ಅಂಗಾಂಗ ದಾನ ಮಾಡಿ ಮತ್ತೊಬ್ಬರಿಗೆ ಬದುಕು ನೀಡಿದ್ದು ಇತರರಿಗೆ ಮಾದರಿಯಾದ ಕಾರ್ಯವಾಗಿದೆ. ಇದಕ್ಕೆ ಸ್ಪಂದಿಸಿದ ವನ್ನಾಲ ಕುಟುಂಬಸ್ಥರು ಸಮಾಜಕ್ಕೆ ಮಾದರಿಯಾಗಿದ್ದಾರೆ.
>
> **– ಶ್ರೀ ನೀಲಕಂಠ ಪಟ್ಟದಾರ್ಯ ಮಹಾಸ್ವಾಮಿಗಳು.**
> **ನೀಲಕಂಠೇಶ್ವರ ಮಠ. ಬೆಟಗೇರಿ.**

# ಸಾಂವಿಧಾನಿಕ ಕರ್ತವ್ಯಗಳು ಪ್ರಜಾಪ್ರಭುತ್ವದ ಅಡಿಪಾಯ: ದೇಶದ ನಾಗರಿಕರಿಗೆ ಮೋದಿ ಪತ್ರ



■ **ವಿಜಯಸಾಕ್ಷಿ ಸುದ್ದಿ, ನವ ದೆಹಲಿ**

ಸಂವಿಧಾನ ದಿನದಂದು ದೇಶದ ನಾಗರಿಕರಿಗೆ ಪತ್ರ ಬರೆದಿರುವ ಪ್ರಧಾನಿ ಮೋದಿ, ಮತದಾನದ ಹಕ್ಕನ್ನು ಸಕ್ರಿಯವಾಗಿ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸುವ ಸಾಮೂಹಿಕ ಜವಾಬ್ದಾರಿಯನ್ನು ಒತ್ತಿ ಹೇಳಿದ್ದಾರೆ. 18 ವರ್ಷ ತುಂಬಿದ ಮೊದಲ ಬಾರಿಗೆ ಮತದಾನ ಮಾಡುವವರನ್ನು ಗೌರವಿಸುವ ಮೂಲಕ ಶಾಲಾ-ಕಾಲೇಜುಗಳು ಈ ಸಂದರ್ಭವನ್ನು ಆಚರಿಸಬೇಕೆಂದು ಅವರು ಸೂಚಿಸಿದ್ದಾರೆ.

ಈ ವೇಳೆ ಕರ್ತವ್ಯಗಳ ನೆರವೇರಿಕೆಯಿಂದ ಹಕ್ಕುಗಳು ಉದ್ಭವಿಸುತ್ತವೆ ಎಂಬ ಮಹಾತ್ಮ ಗಾಂಧಿಯವರ ನಂಬಿಕೆಯನ್ನು ನೆನಪಿಸಿಕೊಂಡ ಪ್ರಧಾನಿ, ಈ ಜವಾಬ್ದಾರಿಗಳನ್ನು ನಿರ್ವಹಿಸುವುದು ಭಾರತದ ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಅತ್ಯಗತ್ಯ ಎಂದು ಹೇಳಿದ್ದಾರೆ.

ಸಾಂವಿಧಾನಿಕ ಕರ್ತವ್ಯಗಳನ್ನು ಎತ್ತಿಹಿಡಿಯುವಂತೆ ಕರೆ ನೀಡಿರುವ ಪ್ರಧಾನ ಮಂತ್ರಿ ಅವು ಬಲವಾದ ಮತ್ತು ಚೈತನ್ಯಶೀಲ ಪ್ರಜಾಪ್ರಭುತ್ವದ ಮೂಲಾಧಾರ ಎಂದು ದೇಶದ ಜನತೆಗೆ ಕರೆ ನೀಡಿದ್ದಾರೆ.

ಕರ್ತವ್ಯಗಳ ನೆರವೇರಿಕೆಯಿಂದ ಹಕ್ಕುಗಳು ಉದ್ಭವಿಸುತ್ತವೆ ಎಂಬ ಮಹಾತ್ಮ ಗಾಂಧಿಯವರ ನಂಬಿಕೆಯನ್ನು ನೆನಪಿಸಿಕೊಂಡ ಪ್ರಧಾನಿ, ಈ ಜವಾಬ್ದಾರಿಗಳನ್ನು ನಿರ್ವಹಿಸುವುದು ಭಾರತದ ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಅತ್ಯಗತ್ಯ ಎಂದು ಹೇಳಿದ್ದಾರೆ.

ಇಂದು ನಾವು ತೆಗೆದುಕೊಳ್ಳುವ ನಿರ್ಧಾರಗಳು ಮುಂದಿನ ಪೀಳಿಗೆಯ ಭವಿಷ್ಯವನ್ನು ರೂಪಿಸುತ್ತವೆ. ದೇಶವು ವಿಕಸಿತ ಭಾರತದ ದೃಷ್ಟಿಕೋನದತ್ತ ಸಾಗುತ್ತಿರುವಾಗ ಜನರು ತಮ್ಮ ಕರ್ತವ್ಯಗಳನ್ನು ಮುಂಚೂಣಿಯಲ್ಲಿಡಬೇಕೆಂದು ಒತ್ತಾಯಿಸಿದರು.

ನಮ್ಮ ಸಂವಿಧಾನವು ಮಾನವ ಘನತೆ, ಸಮಾನತೆ ಮತ್ತು ಸ್ವಾತಂತ್ರ್ಯಕ್ಕೆ ಅತ್ಯಂತ ಪ್ರಾಮುಖ್ಯತೆಯನ್ನು ನೀಡುತ್ತದೆ. ಇದು ನಮಗೆ ಹಕ್ಕುಗಳೊಂದಿಗೆ ಅಧಿಕಾರ ನೀಡುವುದರ ಜೊತೆಗೆ, ನಾಗರಿಕರಾಗಿ ನಮ್ಮ ಕರ್ತವ್ಯಗಳನ್ನು ನೆನಪಿಸುತ್ತದೆ. ಅದನ್ನು ನಾವು ಯಾವಾಗಲೂ ಪೂರೈಸಲು ಪ್ರಯತ್ನಿಸಬೇಕು. ಈ ಕರ್ತವ್ಯಗಳು ಬಲವಾದ ಪ್ರಜಾಪ್ರಭುತ್ವದ ಅಡಿಪಾಯವಾಗಿದೆ ಎಂದು ಮೋದಿ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ಸಂವಿಧಾನದ ರಚನಕಾರರಿಗೆ ಗೌರವ ಸಲ್ಲಿಸಿರುವ ಮೋದಿ, ಅವರ ದೃಷ್ಟಿಕೋನವು ಭಾರತವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಅನ್ವೇಷಣೆಗೆ ಮಾರ್ಗದರ್ಶನ ನೀಡುತ್ತಿದೆ ಎಂದು ಹೇಳಿದ್ದಾರೆ.

### ಉಚಿತ ಹೃದಯ, ನೇತ್ರ ತಪಾಸಣಾ ಶಿಬಿರದಲ್ಲಿ ಡಾ. ಮುರಳೀಧರ ನಾಯ್ಕ್ ಕರೆ

# ನಿಮ್ಮ ಜೀವನ ಶೈಲಿ ಬದಲಾಯಿಸಿಕೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜೀವನ ಶೈಲಿ, ಒತ್ತಡ, ಆಹಾರ ಪದ್ಧತಿ, ದುರಾಸೆ, ಮಾಲಿನ್ಯಯುತ ಪರಿಸರ ಮತ್ತು ತಿನ್ನುವ ಆಹಾರದಲ್ಲಿರುವ ವಿಷದ ಅಂಶಗಳು, ದುಶ್ಚಟಗಳು, ಹೃದಯ ಸಮಸ್ಯೆಗೆ ಕಾರಣವಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಎಸ್‌ಡಿಎಮ್ ನಾರಾಯಣ ಹಾರ್ಟ್ ಸೆಂಟರ್‌ನ ಹೃದಯ ರೋಗ ತಜ್ಞ ಡಾ. ಮುರಳೀಧರ ನಾಯ್ಕ್ ತಿಳಿಸಿದರು.

ಅವರು ಪಟ್ಟಣದ ಬಾಲಾಜಿ ಆಸ್ಪತ್ರೆಯಲ್ಲಿ ಎಸ್‌ಡಿಎಮ್ ನಾರಾಯಣ ಹಾರ್ಟ್ ಸೆಂಟರ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಬಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕು, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ಕರ್ನಾಟಕ ಗ್ರಾಮಣಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ, ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆಯವರ 78ನೇ ಜನ್ಮದಿನ ಹಾಗೂ ಹಿರಿಯ ನಾಗರಿಕರ ಜನ್ಮದಿನದ ಪ್ರಯುಕ್ತ ಹಮ್ಮಿಕೊಂಡಿದ್ದ ಉಚಿತ ಹೃದಯ ಮತ್ತು ನೇತ್ರ ತಪಾಸಣಾ ಶಿಬಿರದಲ್ಲಿ ಮಾತನಾಡುತ್ತಿದ್ದರು.



ಮುಂಜಾನೆಯಿಂದಲೇ ನೂರಾರು ಜನರು ಶಿಬಿರದ ಸ್ಥಳಕ್ಕೆ ಆಗಮಿಸಿದ್ದರು. ಚಿಕಿತ್ಸೆಗೆ ಬಂದವರಿಗೆ ಉಚಿತ ಹೃದಯ ತಪಾಸಣೆ, ಇಸಿಜಿ, ಇಕೋ, ಶುಗರ್, ಬಿಪಿ ಪರೀಕ್ಷೆಗಳನ್ನು ನಡೆಸಲಾಯಿತು. ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಅನೇಕರು ತಪಾಸಣೆಗೊಳಪಟ್ಟರು. ಮಧ್ಯಾಹ್ನದವರೆಗೂ ನಡೆದ ಶಿಬಿರದಲ್ಲಿ ಸುಮಾರು 258ಕ್ಕೂ ಅಧಿಕ ಜನರು ಹೃದಯ ತಪಾಸಣೆ ಹಾಗೂ 228ಕ್ಕೂ ಹೆಚ್ಚು ಜನ ನೇತ್ರ ತಪಾಸಣೆಗೊಳಗಾದರು.

ಸಾರ್ವಜನಿಕರು ಜೀವನ ಶೈಲಿ ಬದಲಾಯಿಸಿಕೊಳ್ಳಿ. ಒತ್ತಡ ಕಡಿಮೆ ಮಾಡಿಕೊಳ್ಳಿ, ಪೋಷಕಾಂಶವಿರುವ ಆಹಾರ ಸೇವಿಸಿ. ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಿ. ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ವೆಚ್ಚಗಳು ದುಬಾರಿಯಾಗಿರುವ ಸನ್ನಿವೇಶದಲ್ಲಿ ಗ್ರಾಮೀಣ ಭಾಗದ ಜನರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಹೆಚ್ಚು ಸಹಕಾರಿಯಾಗಿವೆ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಇಂದಿನ ಆಧುನಿಕ ಜೀವನ ಶೈಲಿಯು ಹೃದಯ ರೋಗಕ್ಕೆ ಪ್ರಮುಖ ಕಾರಣವಾಗಿದೆ. ಹೃದಯ ಮತ್ತು ಕಣ್ಣು ಮಾನವನ ಪ್ರಮುಖ ಅಂಗಗಳಾಗಿವೆ. ಹಿರಿಯ ನಾಗರಿಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.


ಪ್ರಾಸ್ತಾವಿಕವಾಗಿ ಫಕ್ಕೀರೇಶ ರಟ್ಟೀಹಳ್ಳಿ, ಮಾಲಾದೇವಿ ದಂದರಗಿ ಮಾತನಾಡಿದರು. ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಪ್ರಕಾಶ ಉಪನಾಳ, ಚನ್ನಪ್ಪ ಕೋಲಕಾರ, ಎಂ.ಕೆ. ಕಳ್ಳಿಮಠ, ನೀಲಪ್ಪ ಕರ್ಜಕ್ಕಣ್ಣವರ, ಎಸ್‌ಡಿಎಮ್‌ನ ವೀರೇಶ, ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕಿನ ಧರ್ಮಸ್ಥಳ ಸಂಘದ ಯೋಜನಾಧಿಕಾರಿ ಪುನೀತ್ ಓಲೇಕಾರ, ಕೊಪ್ಪಳ ಪ್ರಾದೇಶಿಕ ಕಚೇರಿಯ ಬಿಸಿ ಯೋಜನಾಧಿಕಾರಿ ಚಂದ್ರಶೇಖರ, ಆಂತರಿಕ ಲೆಕ್ಕಪರಿಶೋಧಕರು ಚಂದ್ರಹಾಸ, ಲಕ್ಷ್ಮೇಶ್ವರ ವಲಯದ ಮೇಲ್ವಿಚಾರಕ ನಿಂಗಪ್ಪ ಪಾಟೀಲ್, ಸೋಮೇಶ್ವರ ವಲಯದ ಮೇಲ್ವಿಚಾರಕಿ ಶ್ರುತಿ, ಸೇವಾ ಪ್ರತಿನಿಧಿಗಳಾದ ಗಿರಿಜಾ, ಶೋಭಾ, ನಿರ್ಮಲಾ, ಲತಾ, ವಾಹಿದಾ, ಮಂಗಳ, ಈರಮ್ಮಾ, ವಾಣಿ, ಲಕ್ಷ್ಮೀ, ಸಹನಾ, ಈರಮ್ಮ, ನಿರ್ಮಲಾ, ಗಂಗಮ್ಮ, ಮಂಜುಳಾ, ಹಾಗೂ ಜಯಪ್ರಿಯ ಕಣ್ಣಿನ, ನಾರಾಯಣ ಹೃದಯಾಲಯದ ವೈದ್ಯರು, ಸಿಬ್ಬಂದಿಗಳು ಹಾಜರಿದ್ದರು.

# ಗಜೇಂದ್ರಗಡ ಕಾನಿಪ ತಾಲೂಕಾಧ್ಯಕ್ಷರಾಗಿ ಮಂಜುನಾಥ ರಾಠೋಡ ಅವಿರೋಧ ಆಯ್ಕೆ

■ **ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಪಟ್ಟಣದ ರೋಣ ರಸ್ತೆಯಲ್ಲಿನ ಪ್ರವಾಸಿ ಮಂದಿರದಲ್ಲಿ ಬುಧವಾರ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಮಂಜುನಾಥ ರಾಠೋಡ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಗೌರವಾಧ್ಯಕ್ಷರಾಗಿ ಪ್ರಾಣೇಶ ಕೊಡಗಾನೂರ, ಉಪಾಧ್ಯಕ್ಷರಾಗಿ ಚನ್ನು ಸಮಗಂಡಿ, ಮಲ್ಲಯ್ಯ ಗುಂಡಗೋಪುರಮಠ, ಪ್ರಧಾನ ಕಾರ್ಯದರ್ಶಿಯಾಗಿ ಎಸ್.ಎಂ. ಸೈಯದ್, ಸಹ



ಕಾರ್ಯದರ್ಶಿಗಳಾಗಿ ಅಲ್ಲಾಭಕ್ಷಿ ನದಾಫ್, ಸಂಗಮೇಶ ಮೆಣಸಗಿ, ಖಜಾಂಚಿಯಾಗಿ ಶೀತಲ ಓಲೆಕಾರ ಆಯ್ಕೆಯಾದರು. ಸಭೆಯ ಅಧ್ಯಕ್ಷತೆಯನ್ನು ಗಜೇಂದ್ರಗಡ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷ ಶ್ರೀಶೈಲ ಕುಂಬಾರ ವಹಿಸಿದ್ದರು. ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ನಿಂಗಪ್ಪ ಬೇವಿನಕಟ್ಟಿ, ಶಿವಕುಮಾರ ಶಶಿಮಠ, ಯಲ್ಲಪ್ಪ ತಳವಾರ ಸೇರಿ ನರೇಗಲ್ ಹೋಬಳಿಯ ವರದಿಗಾರರು ಇದ್ದರು.

### ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಜನ್ಮದಿನಾಚರಣೆ ಹಿನ್ನೆಲೆ

# ವೃದ್ಧಾಶ್ರಮದ ಹಿರಿಯರಿಗೆ ಹಣ್ಣು-ಹಂಪಲ ವಿತರಣೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರ ಮಾಡದ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ನಾಡಿನ ಜನರ ಮನೆ, ಮನಗಳಲ್ಲಿ ಶ್ರೀ ವೀರೇಂದ್ರ ಹೆಗ್ಗಡೆಯವರು ನೆಲೆ ನಿಂತಿದ್ದಾರೆ. ಅವರ ಸಮಾಜಮುಖಿ ಕೆಲಸಗಳಿಂದ ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಾಣವಾಗುವಂತಾಗಿದೆ ಎಂದು ರೈತಪರ ಹೋರಾಟಗಾರ ಮಂಜುನಾಥ ಮಾಗಡಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಯಜಮಾನ್ ಜಿ.ಎಫ್. ಉಪನಾಳ ಶಾಂತಿಧಾಮ ವೃದ್ಧಾಶ್ರಮದಲ್ಲಿ ಮಂಗಳವಾರ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಜನ್ಮದಿನಾಚರಣೆಯ ಪ್ರಯುಕ್ತ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ವತಿಯಿಂದ ವೃದ್ಧಾಶ್ರಮದ ಹಿರಿಯರಿಗೆ ಹಣ್ಣು-ಹಂಪಲಗಳನ್ನು



ವಿತರಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಧರ್ಮಸ್ಥಳ ಕೇವಲ ಒಂದು ಯಾತ್ರಾ ಸ್ಥಳವಾಗಿರದೆ, ಅದೊಂದು ಧಾರ್ಮಿಕ ಪರಂಪರೆಯನ್ನು ಜಗತ್ತಿಗೆ ಸಾರುವ ಜಾಗೃತ ಸ್ಥಳವಾಗಿದೆ. ಈ ಸ್ಥಳ, ಖಾವಂದರನ್ನು ಟೀಕಿಸುವ ಕಾರ್ಯ ಮಾಡುವ ಯಾವುದೇ ವ್ಯಕ್ತಿಯೂ ಸಹ ಬೆಳೆಯಲು ಸಾಧ್ಯವಿಲ್ಲ. ಲಕ್ಷಾಂತರ ಜನರಿಗೆ ನಿರಂತರವಾಗಿ ಅನ್ನದಾಸೋಹ ನಡೆಸಿಕೊಂಡು ಹೋಗುವ ಶ್ರೀ ಹೆಗ್ಗಡೆಯವರು ಕಳಂಕರಹಿತರಾಗಿ ಜನಹಿತ ಕಾರ್ಯಗಳನ್ನು ನಡೆಸಿಕೊಂಡು ಹೋಗುತ್ತಿದ್ದಾರೆ. ಅವರ ಜನ್ಮದಿನದಂದು ಅನೇಕ ವಿಶೇಷ ಕಾರ್ಯಕ್ರಮಗಳನ್ನು ಅವರ ಭಕ್ತವೃಂದ ನಡೆಸಿರುವದು ಸ್ತುತ್ಯಾರ್ಹ ಎಂದು ಹೇಳಿದರು.

ಯೋಜನಾಧಿಕಾರಿ ಪುನೀತ್ ಓಲೇಕಾರ ಮಾತನಾಡಿ, ಡಾ. ವೀರೇಂದ್ರ ಹೆಗ್ಗಡೆಯವರು ಸಾಮಾಜಿಕ ಚಿಂತನೆ, ದೂರದೃಷ್ಟಿಯಿಂದ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ರೂಪಿಸಿದ್ದು, ಸುಮಾರು 21 ಸಾವಿರಕ್ಕೂ ಅಧಿಕ ಕಡುಬಡವರಿಗೆ, ನಿರ್ಗತಿಕರಿಗೆ ಮಾಶಾಸನ, ಮನೆ ಇಲ್ಲದವರಿಗೆ ಮನೆ ನಿರ್ಮಿಸಿಕೊಡುವದು, ಎಲ್ಲಕ್ಕಿಂತ ಮುಖ್ಯವಾಗಿ ಕೆರೆಗಳ ಪುನುರುಜ್ಜೀವನ ಕಾರ್ಯ ಬಹುದೊಡ್ಡ ಅಂದೋಲನವಾಗಿ ಮಾಡಿದ್ದು ಶ್ರೀಗಳ ಹೆಗ್ಗಳಿಕೆಯಾಗಿದೆ. ಇಂತಹ ಮಹಾನ್ ಪುರುಷರ ಹುಟ್ಟುಹಬ್ಬವನ್ನು ಹಿರಿಯರ ಸಾನ್ನಿಧ್ಯದಲ್ಲಿ ಆಚರಿಸುವ ಕಾರ್ಯವನ್ನ ಮಾಡಿದ್ದು ಹೆಮ್ಮೆಯೆನಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಪ್ರಕಾಶ ಉಪನಾಳ ವಹಿಸಿದ್ದರು. ಉಪಾಧ್ಯಕ್ಷ ದಿಗಂಬರ ಪೂಜಾರ, ಬಸವರಾಜ ಹಿರೇಮನಿ, ಧರ್ಮಸ್ಥಳ ಸಂಸ್ಥೆಯ ಕೊಪ್ಪಳ ವಲಯ ಬಿಸಿ ಯೋಜನಾಧಿಕಾರಿ ಚಂದ್ರಶೇಖರ, ಆಂತರಿಕ ಲೆಕ್ಕಪರಿಶೋಧಕ ಚಂದ್ರಹಾಸ, ಸೇವಾ ಪ್ರತಿನಿಧಿಗಳಾಗಿರುವ ನಿಂಗಪ್ಪ ಪಾಟೀಲ, ಶೃತಿ, ಸಚಿನ್, ಈರಣ್ಣ, ವೃದ್ಧಾಶ್ರಮದ ನಿಲಯ ಮೇಲ್ವಿಚಾರಕಿ ಅಶ್ವಿನಿ ಮುಂತಾದವರಿದ್ದರು.

# ಕರವೇ ಘಟಕಗಳ ಪದಾಧಿಕಾರಿಗಳ ಆಯ್ಕೆ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯ ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ಜಿಲ್ಲಾಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ವಿವಿಧ ಘಟಕಗಳ ಪದಾಧಿಕಾರಿಗಳ ಆಯ್ಕೆ ನಡೆಯಿತು.

ತಾಲೂಕಾ ಗೌರವಾಧ್ಯಕ್ಷರಾಗಿ ಅಶೋಕ ಹುಬ್ಬಳ್ಳಿ, ರೈತ ಘಟಕದ ಅಧ್ಯಕ್ಷರಾಗಿ ಪ್ರವೀಣ ಕುರಿ, ಕಾರ್ಮಿಕ ಘಟಕದ ತಾಲೂಕಾಧ್ಯಕ್ಷರಾಗಿ ತಿರಕಪ್ಪ ಜಾಧವ, ಸಂಘಟನಾ ಕಾರ್ಯದರ್ಶಿಯಾಗಿ ನಾಗಯ್ಯ ಕಾಶಿನಾಥ, ತಾಲೂಕಾ ಸಂಚಾಲಕರಾಗಿ ಮಂಜುನಾಥ ಗುಡಿಮನಿ ಹಾಗೂ ತಾಲೂಕಿನ ವಕ್ತಾರರಾಗಿ ಮಂಜುನಾಥ ಹುಬ್ಬಳ್ಳಿ, ರೈತ ಘಟಕದ ಉಪಾಧ್ಯಕ್ಷರಾಗಿ ಮಂಜುನಾಥ ಓಲೇಕಾರ, ತಾಲೂಕಾ ಸಾಮಾಜಿಕ ಜಾಲತಾಣದ ಸಂಚಾಲಕರಾಗಿ ರಾಹುಲ್ ಮಡಿವಾಳರ, ವಿದ್ಯಾರ್ಥಿ ಘಟಕದ ಅಧ್ಯಕ್ಷರಾಗಿ ಸಾತ್ವಿಕ್ ಬೂದಿಹಾಳ ಇವರುಗಳನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕರವೇ ಘಟಕದ ಅಧ್ಯಕ್ಷೆ ಲಕ್ಷ್ಮೀ ಹಿತ್ತಲಮನಿ, ತಾಲೂಕಾಧ್ಯಕ್ಷ ಶಿವು ಮಠದ, ಮಹಿಳಾ ಘಟಕದ ಅಧ್ಯಕ್ಷೆ ಯಶೋಧಾ ಬಾಳೋಜಿ, ತಾಲೂಕಾ ಪ್ರಧಾನ ಕಾರ್ಯದರ್ಶಿ ಪ್ರಕಾಶ ಬಡೆಣ್ಣವರ, ಗಾಳೆಪ್ಪ ಮರಡಜ್ಜಣ್ಣವರ, ಮಾಬುಸಾಬ ಢಾಲಾಯತ, ಮಂಜುನಾಥ ಗುಡಿಮನಿ, ಶಮೀರ ರಾಹುತ್, ರಾಜು ಹರಿಜನ, ಶರೀಫ ರಾಹುತ ಮುಂತಾದವು ಉಪಸ್ಥಿತರಿದ್ದರು.

# ಹಿಂದೂ ಸಂಘಟನೆಗಳ ಧರಣಿ 3ನೇ ದಿನಕ್ಕೆ




■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕಳೆದ 2 ದಿನಗಳಿಂದ ಶಿರಹಟ್ಟಿಯ ತಹಸೀಲ್ದಾರ ಕಚೇರಿ ಎದುರುಗಡೆ ನಡೆಯುತ್ತಿರುವ ಧರಣಿ 3ನೇ ದಿನವೂ ಸಹ ಮುಂದುವರೆದಿದೆ. ಬುಧವಾರ ದಲಿತ ಮಿತ್ರ ಮಂಡಳಿಯ ಪದಾಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವೆಂಕಟೇಶ ದೊಡ್ಡಮನಿ, ಪ್ರಶಾಂತ ಕನ್ಯಾಳ, ಸೋಮಪ್ಪ ಲಮಾಣಿ, ಪರಶುರಾಮ ಡೊಂಕಬಳ್ಳಿ, ಗಂಗವ್ವ ಲಮಾಣಿ, ಗೀತಾ ಲಮಾಣಿ, ಶ್ವೇತಾ ಲಮಾಣಿ, ಸತೀಶ ಕುಂಬಾರ, ವಿಶಾಲ ಗೋಕಾವಿ, ಕಿರಣಸ್ವಾಮಿ ಹಿರೇಮಠ, ಮಂಜುನಾಥ ವಡ್ಡರ, ಆನಂದ ಹುಡೇದ, ರವಿ ಬಂಡಿವಡ್ಡರ, ಪ್ರಕಾಶ ಕುಡಲಿಂಗಣ್ಣವರ, ಬೂದೇಶ ಹಡಪದ, ಬಸವರಾಜ ಬಜಂತ್ರಿ, ಬಸವರಾಜ ಹೊನ್ನಪ್ಪನವರ, ನವೀನ ಅರಗಂಜಿ, ಈರಪ್ಪ ಚಕ್ರಸಾಲಿ ಮುಂತಾದವರಿದ್ದರು.

# ಸಂವಿಧಾನವು ನಮ್ಮೆಲ್ಲರನ್ನು ರಕ್ಷಿಸುವ ಬಹುದೊಡ್ಡ ಕಾನೂನು

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬುಧವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯ ಆವರಣದಲ್ಲಿ ತಾಲೂಕಾಡಳಿತದ ವತಿಯಿಂದ ಸಂವಿಧಾನ ದಿವಸ ಆಚರಣೆ ಮಾಡಲಾಯಿತು.

ಇದಕ್ಕೂ ಮೊದಲು ಶ್ರೀ ಬಸವೇಶ್ವರ ವೃತ್ತದಿಂದ ಆರಂಭಗೊಂಡ ಜಾಥಾ ಸಂಗೊಳ್ಳಿ ರಾಯಣ್ಣ ವೃತ್ತ, ಡಾ. ಬಿ.ಆರ್. ಅಂಬೇಡ್ಕರ ವೃತ್ತ ಹಾಗೂ ನೆಹರೂ ವೃತ್ತ ಮಾರ್ಗವಾಗಿ ತಾಲೂಕು ಕಚೇರಿ ಆವರಣಕ್ಕೆ ಬಂದು ತಲುಪಿತು. ಜಾಥಾದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ವರ್ಗ, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಎನ್.ಎಸ್.ಎಸ್ ಮಕ್ಕಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು. ಕೆ.ಎಚ್. ಹೊಂಬಾಳಿಮಠ ಸಂವಿಧಾನ ಪೀಠಿಕೆಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ.ಎ. ಬಳಿಗೇರ, ಡಿ.ಕೆ. ಹೊನ್ನಪ್ಪನವರ, 1949ರ ನವೆಂಬರ್ 26ರಂದು ಸಂವಿಧಾನವನ್ನು ಅಳವಡಿಸಿಕೊಳ್ಳಲಾಯಿತು. ಇದರ ಅಂಗವಾಗಿಯೇ ನಾವು ಇಂದು ಸಂವಿಧಾನ ದಿನವನ್ನು ಆಚರಣೆ ಮಾಡುತ್ತಿದ್ದೇವೆ. ನಮ್ಮ ಸಂವಿಧಾನ ದೇಶದ ಜನರನ್ನು



ಸಶಕ್ತಗೊಳಿಸಿ, ಸರ್ವರಿಗೂ ಸಮಾನತೆ ಒದಗಿಸುವುದರ ಜೊತೆಗೆ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯವನ್ನೂ ನೀಡಿದೆ. ಭಾರತಕ್ಕೆ ಸಂವಿಧಾನವೇ ದೊಡ್ಡ ಬಲ. ನಮ್ಮ ಸಂವಿಧಾನವು ನಮ್ಮೆಲ್ಲರನ್ನು ರಕ್ಷಿಸುವ ಬಹುದೊಡ್ಡ ಕಾನೂನು. ಭಾರತದ ಸಂವಿಧಾನಕ್ಕೆ ವಿಶ್ವದಲ್ಲೇ ದೊಡ್ಡ ಸಂವಿಧಾನ ಎಂಬ ಹಿರಿಮೆ ಇದೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ತಾ.ಪಂ ಇಓ ರಾಮಣ್ಣ ದೊಡ್ಡಮನಿ, ಸಮಾಜ ಕಲ್ಯಾಣ ಇಲಾಖೆಯ ಸಹ ನಿರ್ದೇಶಕ ಗೋಪಾಲ ಲಮಾಣಿ, ಬಿಇಓ ಎಚ್.ಎನ್. ನಾಯ್ಕ, ಪಿಎಸ್‌ಐ ಎಸ್.ಟಿ. ಕಡಬಿನ, ಶಿರಸ್ತೇದಾರ ಗಿರಿಜಾ ಪೂಜಾರ, ನಾಗರಾಜ ಲಕ್ಕುಂಡಿ, ಸಂದೀಪ ಕಪ್ಪತ್ತನವರ, ಡಿ.ಕೆ. ಹೊನ್ನಪ್ಪನವರ, ಫಕೀರೇಶ ರಟ್ಟಿಹಳ್ಳಿ, ಜಾನು ಲಮಾಣಿ, ನಂದಕ್ಕ ಪಲ್ಲೇದ, ರಾಮಣ್ಣ ಕಂಬಳಿ, ಅಕ್ಬರ್ ಯಾದಗಿರಿ, ಸಂತೋಷ್ ತೊಡೇಕರ, ವಿನಾಯಕ ಪರಬತ ಮುಂತಾದವರು ಉಪಸ್ಥಿತರಿದ್ದರು.

# ಬಿ.ಇಡಿ ದಾಖಲಾತಿ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪ್ರವೇಶ ಪ್ರಕ್ರಿಯೆ ನ. 25ರಿಂದ ಪ್ರಾರಂಭವಾಗಿದೆ. ವಿದ್ಯಾರ್ಥಿಗಳು ಡಿ. 5ರ ಒಳಗೆ ಚಲನ್ ಪಾವತಿಸಿ, ಅದರ ಮೂಲ ಪ್ರತಿ ಸೇರಿದಂತೆ ಇತರೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಸಂಬಂಧಿಸಿದ ಜಿಲ್ಲಾ ನೋಡಲ್ ಕೇಂದ್ರಕ್ಕೆ ಹಾಜರಾಗಿ ದಾಖಲಾತಿ ಪತ್ರವನ್ನು ಪಡೆದುಕೊಳ್ಳುವುದು ಹಾಗೂ ನಿಗದಿತ ದಿನಾಂಕದೊಳಗೆ ಸಂಬಂಧಿಸಿದ ಕಾಲೇಜಿಗೆ ಸೇರ್ಪಡೆಗೊಳ್ಳಲು ಸೂಚಿಸಿದೆ.

ಮೊದಲ ಸುತ್ತಿನ ಆಯ್ಕೆಯಲ್ಲಿ ಹಂಚಿಕೆಯಾದ ಕಾಲೇಜಿಗೆ ಸೇರಲು ಬಯಸದೇ ಇರುವ ಅಭ್ಯರ್ಥಿಗಳು ಡಿ. 5ರೊಳಗೆ ಆಪ್ಟೇಡ್ ಫಾರ್ ದಿ ಸೆಕೆಂಡ್ ರೌಂಡ್ ಎಂದು ನಮೂದಿಸಬೇಕು. ದಾಖಲಿಸದೇ ಇರುವ ಅಭ್ಯರ್ಥಿಗಳನ್ನು ಬಿಟ್ಟು ಎರಡನೇ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಮೊದಲ ಪಟ್ಟಿಯ ಹಂಚಿಕೆ ಪ್ರಕಾರ ಸೇರ್ಪಡೆಯಾಗಿ ಉಳಿಕೆಯಾಗಿರುವ ಸೀಟುಗಳು ಕಾಲೇಜುವಾರು ಸೀಟ್ ಮ್ಯಾಟ್ರಿಕುಲೇಷನ್‌ನ್ನು ಡಿ. 8ರಂದು ಬಿಡುಗಡೆಗೊಳಿಸಲಾಗುವುದು.

ಮೊದಲ ಪಟ್ಟಿಯಲ್ಲಿ ಸೀಟು ಹಂಚಿಕೆಯಾದ ಕಾಲೇಜುಗಳಿಗೆ ಸೇರಬಯಸದ ಆಪ್ಟೇಡ್ ಫಾರ್ ದಿ ಸೆಕೆಂಡ್ ರೌಂಡ್ ಎಂದು ಅಭಿಮತವನ್ನು ದಾಖಲಿಸಿದ ಅಭ್ಯರ್ಥಿಗಳು ತಮ್ಮ ಎರಡನೇ ಮತ್ತು ಕೊನೆಯ ಸೀಟು ಹಂಚಿಕೆಗಾಗಿ ಡಿ. 10ರವರೆಗೆ ಸೀಟ್ ಮ್ಯಾಟ್ರಿಕ್ ಪ್ರಕಾರ ಕಾಲೇಜುಗಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಹಾಗೂ ಡಯಟ್ ನೋಡಲ್ ಅಧಿಕಾರಿ ಬಿ.ಎಫ್. ಅರವಟಗಿ (ಮೊಬೈಲ್–9482176932) ಇವರನ್ನು ಸಂಪರ್ಕಿಸಬಹುದಾಗಿದೆ.


### ಪಹಣಿ ಪತ್ರಿಕೆ (ಉತಾರ) ಪ್ರದರ್ಶಿಸುವ ಮೂಲಕ ರಸ್ತೆಯಲ್ಲಿ ನಿಂತು ಪ್ರತಿಭಟಿಸಿದ ಮೆಕ್ಕೆಜೋಳ ಬೆಳೆಗಾರರು

# ರೈತರ ಹೋರಾಟ ಕೈಬಿಡುವ ಪ್ರಶ್ನೆಯೇ ಇಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕಾಗಿ ರೈತ ಸಂಘಟನೆಗಳು ನಡೆಸುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ ಬುಧವಾರ 12ನೇ ದಿನ ಪೂರೈಸಿದ್ದು, 12ನೇ ದಿನದಂದು ನಾವೆಲ್ಲರೂ ಗೋವಿನಜೋಳ ಬೆಳೆದು ಹಾನಿಗೊಳಗಾಗಿದ್ದೇವೆ ಎಂದು ತಮ್ಮ ತಮ್ಮ ಪಹಣಿ ಪತ್ರಿಕೆ (ಉತಾರ) ಪ್ರದರ್ಶಿಸುವ ಮೂಲಕ ರಸ್ತೆಯಲ್ಲಿ ನಿಂತು ಮತ್ತೊಂದು ರೀತಿ ಪ್ರತಿಭಟನೆ ನಡೆಸಿ ಸರಕಾರದ ಗಮನ ಸೆಳೆಯಲು ಪ್ರಯತ್ನಿಸಿದರು.

ಈ ವೇಳೆ ಮಾತನಾಡಿದ ಪುರಸಭೆ ಮಾಜಿ ಉಪಾಧ್ಯಕ್ಷ ಹಾಗೂ ಮುಸ್ಲಿಂ ಸಮಾಜದ ಮುಖಂಡ ದಾದಾಪೀರ ಮುಚ್ಚಾಲೆ, ಹಸಿರು ಸೇನೆ ಅಧ್ಯಕ್ಷ ಜಾಯನಗೌಡ ಮಾತನಾಡಿ, ರೈತರು ಈ ದೇಶದ ಸಂಪತ್ತು. ಅತಿವೃಷ್ಟಿ, ಅನಾವೃಷ್ಟಿ, ರೋಗಬಾಧೆ, ಬೆಲೆ ಕುಸಿತ ಹೀಗೆ ಹತ್ತಾರು ಸಮಸ್ಯೆಗಳ ನಡುವೆ ಬೆವರು ಸುರಿಸಿ ದುಡಿಯುವ ರೈತರ ಬೆನ್ನಿಗೆ ಸರ್ಕಾರ ನಿಲ್ಲಬೇಕು. ರೈತರ ಹೋರಾಟಕ್ಕೆ ಸ್ಪಂದಿಸಲಾಗಿದೆ ಎಂದು ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸುವ ಆಶ್ವಾಸನೆ ಹಾಗೆಯೇ ಉಳಿಯಬಾರದು. ಕೂಡಲೇ




ಹಾಳಾಗುತ್ತಿರುವ ಗೋವಿನಜೋಳವನ್ನು ಖರೀದಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು. ರೈತರ ಹೋರಾಟ ಕೈಬಿಡುವ ಪ್ರಶ್ನೆಯೇ ಇಲ್ಲ ಎಂದರು.

ನಮ್ಮ ನಡುವೆ ದಕ್ಷ, ಪ್ರಾಮಾಣಿಕ ಅಧಿಕಾರಿಯಾಗಿ ಜನರ ನೋವಿಗೆ ಸ್ಪಂದಿಸುತ್ತಿದ್ದ ಹಾಗೂ ರೈತರ ಮತ್ತು ಬಡವರ ಪಾಲಿಗೆ ದಾರಿದೀಪವಾಗಿದ್ದ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಅವರ ಅಕಾಲಿಕ ಸಾವು ಇಡೀ ನಾಡಿಗೆ ಬರಸಿಡಿಲಿನಂತೆ ಬಂದೆರಗಿದೆ. ಇಂತಹ ವ್ಯಕ್ತಿಯನ್ನು ಕಳೆದುಕೊಂಡ ಆ ಕುಟುಂಬದ ನೋವಿನಲ್ಲಿ ರೈತ ಸಮುದಾಯವಿದೆ. ಭಗವಂತ ಅವರ ಅಗಲುವಿಕೆಯ ನೋವನ್ನು ತಡೆದುಕೊಳ್ಳುವ ಶಕ್ತಿಯನ್ನು ಕುಟುಂಬಕ್ಕೆ ನೀಡಲಿ ಎಂದು ಪ್ರತಿಭಟನಾಕಾರರು ಪ್ರಾರ್ಥಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಅವರ ನಿಧನಕ್ಕೆ ರೈತರು ಶ್ರದ್ಧಾಂಜಲಿ ಸಲ್ಲಿಸಿದರು.

ಹೋರಾಟದ ನೇತೃತ್ವ ವಹಿಸಿರುವ ಮಂಜುನಾಥ ಮಾಗಡಿ, ರವಿಕಾಂತ ಅಂಗಡಿ, ಎಂ.ಎಸ್. ದೊಡ್ಡಗೌಡರ, ಹೊನ್ನಪ್ಪ ವಡ್ಡರ, ನಾಗರಾಜ ಚಿಂಚಲಿ, ನೀಲಪ್ಪ ಶರಸೂರಿ ಮಾತನಾಡಿ, ನ್ಯಾಯಯುತ ಬೇಡಿಕೆಗಾಗಿ ಕಳೆದ 12 ದಿನಗಳಿಂದ ರೈತರು ಶಾಂತಿ, ಸಮಾಧಾನದಿಂದ ವಿನೂತನ ರೀತಿಯಿಂದ ಹೋರಾಟ ಮಾಡುತ್ತಿದ್ದೇವೆ. ಕಳೆದ 6 ದಿನಗಳ ಹಿಂದೆ ಸರಕಾರ ಬೆಂಬಲ ಬೆಲೆ ಕೇಂದ್ರ ಪ್ರಾರಂಭಿಸುವ ಭರವಸೆ ನೀಡಿದ್ದರಿಂದ ರೈತರಿಗೆ ನೆಮ್ಮದಿಯಾಗಿದೆ. ಆದರೆ ಇದು ಮೂಗಿಗೆ ತುಪ್ಪ ಒರೆಸುವ ಕಾರ್ಯವಾಗಬಾರದು. ರೈತರ ಒಕ್ಕೊರಲಿನ ಕೂಗು, ಹೋರಾಟಕ್ಕೆ 2/3 ದಿನಗಳಲ್ಲಿ ಸ್ಪಂದಿಸದಿದ್ದರೆ ಹೋರಾಟದ ಸ್ವರೂಪ ಮತ್ತೆ ತೀವ್ರತೆ ಪಡೆದುಕೊಳ್ಳಲಿದೆ ಎಂದರು.

ಹೋರಾಟದಲ್ಲಿ ಎಂ.ಎಂ. ಗದಗ, ಪ್ರಕಾಶ ಅಂಗಡಿ, ಕೃಷ್ಣಪ್ಪ ಲಮಾಣಿ, ಶರಣು ಗೋಡಿ, ಮಲ್ಲೇಶ ಅಂಕಲಿ, ಪರಮೇಶ ಹಂಗನಕಟ್ಟಿ, ಶಿವಪುತ್ರಪ್ಪ ತಾರಿಕೊಪ್ಪ, ಬಸವರಾಜ ಹಿರೇಮನಿ ಸೇರಿದಂತೆ ಅನೇಕರಿದ್ದರು.

# ಬಾಲಕಿಯರ ಕಬಡ್ಡಿ ತಂಡ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿ–ಧಾರವಾಡ ಉತ್ತರ ಕರ್ನಾಟಕ ಸಹೋದಯ ಸಂಸ್ಥೆಯ ವತಿಯಿಂದ ನ. 25ರಂದು ಹುಬ್ಬಳ್ಳಿಯ ಸಂಸ್ಕಾರ ಆಂಗ್ಲ ಮಾಧ್ಯಮ ಶಾಲಾ ಮೈದಾನದಲ್ಲಿ ಕಬಡ್ಡಿ ಪಂದ್ಯಾವಳಿಯನ್ನು ಆಯೋಜಿಸಲಾಗಿತ್ತು. ಸದರಿ ಪಂದ್ಯಾವಳಿಯಲ್ಲಿ ಗದಗ ಕೆಎಲ್‌ಇ ಸಂಸ್ಥೆ ಶಾಲೆಯ ಬಾಲಕಿಯರ ತಂಡ ಪ್ರಥಮ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದೆ.

ತಂಡದ ಕ್ರೀಡಾಳುಗಳಾದ ಸಾಕ್ಷಿ ಹೊಳಗುಂದಿ, ಚಿನ್ಮಯಿ ಹಿರೇಮಠ, ವಿನುತಾ ಸಂಶಿ, ನೇಹಾ ಪಂಚಮ ಪಾಟೀಲ, ದಿವ್ಯಾ ಹೂಗಾರ, ವಿಧಿ ಜೈನ್, ಸೃಷ್ಟಿ ಮಲಕಶೆಟ್ಟಿ, ಪೂರ್ವಿ ದಿಬ್ಬದಮನಿ, ಅನ್ವಿತಾ ಆಡಪ್ಪನವರ, ಸಹನಾ ದೊಡ್ಡಮನಿ, ಅದಿತಿ ಮೇರವಾಡೆ, ಸಾನ್ವಿ ಚನ್ನಪ್ಪಗೌಡರ ಮತ್ತು ತರಬೇತುದಾರರಾದ ಶಿವನಗೌಡ ಪಾಟೀಲ, ದೈಹಿಕ ಶಿಕ್ಷಕರಾದ ರವೀಂದ್ರ ಗಡಾದ ಮತ್ತು ತಂಡದ ಮ್ಯಾನೇಜರ್ ಹೇಮಾ ಸೊಪ್ಪಿನ ಅವರಿಗೆ ಶಾಲೆಯ ಪ್ರಾಂಶುಪಾಲರಾದ ಕಲ್ಪನಾ ಚಚಡಿ ಹಾಗೂ ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

# ಶ್ರೀ ವೀರಭದ್ರೇಶ್ವರ ಕಾರ್ತಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಜ್ಞಾನದ ಕಗ್ಗತ್ತಲನ್ನು ಹೊಡೆದೋಡಿಸಿ ಸುಜ್ಞಾನದ ಬೆಳಕನ್ನು ಪಸರಿಸುವುದೇ ನಿಜವಾದ ಕಾರ್ತಿಕೋತ್ಸವವಾಗಿದ್ದು, ಶಿರಹಟ್ಟಿ ಪಟ್ಟಣದಲ್ಲಿ ಕಳೆದ 43 ವರ್ಷಗಳಿಂದ ಪೇಟೆ ಶ್ರೀ ವೀರಭದ್ರೇಶ್ವರ ಕಾರ್ತಿಕೋತ್ಸವವನ್ನು ಆಚರಿಸುತ್ತಾ ಬರುವುದರ ಜೊತೆ–ಗೆ ಕಲಾವಿದರನ್ನು, ಸಮಾಜದಲ್ಲಿ ಸಾಧನೆಗೈದವರಿಗೆ ಸತ್ಕರಿಸುವ ಕಾರ್ಯ ಶ್ಲಾಘನೀಯವಾದದ್ದು ಎಂದು ಮಲ್ಲಸಮುದ್ರ–ಕಳಸಾಪೂರದ ಜ.ಫಕೀರೇಶ್ವರ ಸ್ವಾಮೀಜಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ಪಟ್ಟಣದಲ್ಲಿ ಪೇಟೆ ಶ್ರೀ ವೀರಭದ್ರೇಶ್ವರ ದೇವರ 43ನೇ ವರ್ಷದ ಕಾರ್ತಿಕೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನಾವು ಧರ್ಮವನ್ನು ರಕ್ಷಿಸಿದರೆ, ಧರ್ಮವೂ ನಮ್ಮನ್ನು ರಕ್ಷಿಸುತ್ತದೆ. ದೀಪ ಎತ್ತರದಲ್ಲಿದ್ದರಷ್ಟೇ ಎಲ್ಲ ಕಡೆಗೂ ಬೆಳಕು ಬರಲು ಸಾಧ್ಯ. ಹಾಗೆಯೇ




ಮನುಷ್ಯ ಎಷ್ಟೇ ದೊಡ್ಡವನಾಗಿದ್ದರೂ ಸಹ ಧರ್ಮ ಮಾರ್ಗದಲ್ಲಿ ನಡೆಯಬೇಕು, ತಂದೆ–ತಾಯಿಗೆ ವಿಧೇಯನಾಗಿರಬೇಕು. ಕಾರ್ತಿಕೋತ್ಸವ ನೆಪ ಮಾತ್ರ ಆಗಬಾರದು, ಅದನ್ನು ಸಾರ್ಥಕಗೊಳಿಸುವುದಕ್ಕಾಗಿ ಎಲ್ಲರೂ ಸನ್ಮಾರ್ಗದಲ್ಲಿ ನಡೆಯಬೇಕು. ಈಗಿರುವ ದೇವಸ್ಥಾನ ಚಿಕ್ಕದಾಗಿದ್ದು ಮುಂದಿನ ದಿನಗಳಲ್ಲಿ ದೇವಸ್ಥಾನಕ್ಕೆ ಜಾಗೆ ಖರೀದಿಸಿ ಬೃಹತ್ ದೇವಸ್ಥಾನ ನಿರ್ಮಿಸಲು ಎಲ್ಲರೂ ಮುಂದಾಗಬೇಕೆಂದು ಹೇಳಿದರು.

ಉಪನ್ಯಾಸಕಿ ರೇಣುಕಾ ನಾಗರಾಜ ಲಕ್ಕುಂಡಿ ಉಪನ್ಯಾಸ ನೀಡಿದರು. ಶಾಂತಾ ಪಾಟೀಲ ಪ್ರಾರ್ಥನೆಗೈದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಎಂ.ಎಲ್. ಬುರಬರೆ ವಹಿಸಿದ್ದರು. ಸಿ.ಸಿ. ನೂರಶೆಟ್ಟರ, ಬಸವರಾಜ ಹೊಸೂರ, ಕೆ.ಎ. ಬಳಿಗೇರ, ಬಸವರಾಜ ಭೋರಶೆಟ್ಟರ, ಸುರೇಶ ಹವಳದ, ಶಿವು ಪಟ್ಟಣಶೆಟ್ಟರ, ಮುತ್ತು ಮಜ್ಜಗಿ, ಬಸವರಾಜ ರಾಜಮನಿ, ಮುತ್ತು ಹೂಗಾರ ಮುಂತಾದವರು ಉಪಸ್ಥಿತರಿದ್ದರು.

# ಶ್ರೇಷ್ಠ ಪ್ರಜಾಪ್ರಭುತ್ವ ಕಟ್ಟುವಲ್ಲಿ ಭಾಗಿಯಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಸಂವಿಧಾನದ ಪೀಠಿಕೆಯಲ್ಲಿ ನಮ್ಮ ದೇಶದ ಪ್ರಜಾಪ್ರಭುತ್ವದ ಹಿರಿಮೆ, ಶಕ್ತಿ ಹಾಗೂ ಅದರ ಶ್ರೇಷ್ಠ ಗುಣಗಳು ಅಡಗಿವೆ. ಸರ್ವಧರ್ಮಗಳಿಗೂ ಸಮಭಾವ ಎಂಬ ಸದಾಶಯ ಸಂವಿದಾನದ ಮುಖ್ಯ ಧ್ಯೇಯವಾಗಿದೆ. ಭಾರತದ ಶ್ರೇಷ್ಠ ಪ್ರಜಾಪ್ರಭುತ್ವ ಕಟ್ಟುವಲ್ಲಿ ಮಕ್ಕಳು ಪಾಲುದಾರರಾಗಿ ಎಂದು ಹಿರಿಯ ದಿವಾಣಿ ನ್ಯಾಯಾಧೀಶ ಭರತ್ ಯೋಗೀಶ್ ಕರಗುದರಿ ಹೇಳಿದರು.

ಅವರು ತಾಲೂಕಿನ ಒಡೆಯರ ಮಲ್ಲಾಪುರದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಸಂವಿಧಾನ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಭಾರತದ ಸಂವಿಧಾನ ದೇಶದ ಮೂಲಭೂತ



ಕಾನೂನುಗಳ ಗ್ರಂಥವಾಗಿದ್ದು, ನಾವೆಲ್ಲರೂ ಸಂವಿಧಾನದ ಹಕ್ಕುಗಳನ್ನು ಕೇಳುವಂತೆ ಕರ್ತವ್ಯಗಳನ್ನು ಪಾಲಿಸಬೇಕು. ನಮ್ಮ ಮುಂದಿನ ಪೀಳಿಗೆಯಾದ ನೀವು ಸಂವಿಧಾನ ನೀಡಿದ ಸ್ವಾತಂತ್ರ್ಯ, ಸಮಾನತೆಯನ್ನು ಬಳಸಿಕೊಂಡು ಭಾರತವನ್ನು ಶ್ರೇಷ್ಠ ಪ್ರಜಾಪ್ರಭುತ್ವವಾಗಿ ಕಟ್ಟುವಲ್ಲಿ ಪಾಲುದಾರರಾಗಬೇಕು ಎಂದು ಕರೆನೀಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ದಿವಾಣಿ ನ್ಯಾಯಾಧೀಶ ಸತೀಶ್ ಎಂ ಮಾತನಾಡಿ, ಈ ಶಾಲೆಯ ಮಕ್ಕಳು ಸಂವಿಧಾನ ನೀಡಿದ ಗೌರವ ಮತ್ತು ಸ್ಥಾನಮಾನವನ್ನು ಬಳಸಿಕೊಂಡು ವಿವಿಧ ಗ್ರಾಮಗಳಿಂದ ಬಂದ ಮಕ್ಕಳು ತಮ್ಮ ಊರಿಗೆ ಮಾದರಿಯಾಗುವ ರೀತಿಯಲ್ಲಿ ವಿದ್ಯಾಭ್ಯಾಸ ಮಾಡಬೇಕು ಎಂದು ಹೇಳಿದರು.

ವಕೀಲರಾದ ಎನ್.ಸಿ. ಪಾಟೀಲ, ಎಂ.ಎಂ. ಹಾರೋಗೇರಿ ಸಂವಿಧಾನದ ಮಹತ್ವದ ಕುರಿತು ಉಪನ್ಯಾಸ ನೀಡಿದರು. ಶಾಲೆಯ ಪ್ರಾಂಶುಪಾಲ ನಾಗರಾಜ ಕಳಸಾಪುರ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾರ್ಥಿಗಳಿಗೆ ಸಂವಿಧಾನದ ಕುರಿತು ನಡೆಸಿದ ಪ್ರಬಂಧ ಸ್ಪರ್ಧೆಯ ಬಹುಮಾನ ವಿತರಣೆಯನ್ನು ಭರತ್ ಕರಗುದರಿ ಮತ್ತು ಸತೀಶ್ ಎಂ ನಡೆಸಿಕೊಟ್ಟರು.

ಎ.ಎ. ಬೇವಿನಗಿಡದ, ವಿಜಯಕುಮಾರ ಬಂಡಿ, ತಾಲೂಕು ಶಿಕ್ಷಣ ಇಲಾಖೆಯ ರಾಘವೇಂದ್ರ ಜೋಶಿ ಹಾಗೂ ಶಾಲೆಯ ಸಮಸ್ತ ಶಿಕ್ಷಕರು, ವಕೀಲರು ಉಪಸ್ಥಿತರಿದ್ದರು. ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು, ಕಲಾ ಶಿಕ್ಷಕ ಪ್ರವೀಣ್ ಗಾಯಕರ್ ನಿರೂಪಿಸಿದರು, ಶಿಕ್ಷಕಿ ವೀಣಾ ಮಾಡಳ್ಳಿ ವಂದಿಸಿದರು.

ಇದೇ ಸಂದರ್ಭದಲ್ಲಿ ನ್ಯಾಯಾಧೀಶದ್ವಯರು ಮೊರಾರ್ಜಿ ಶಾಲೆಯ ಎಲ್ಲಾ ವಿಭಾಗಗಳಿಗೆ ಭೇಟಿ ನೀಡಿ ಶಾಲೆ, ಪ್ರಯೋಗಾಲಯ, ಭೋಜನಾಲಯಗಳನ್ನು ಖುದ್ದಾಗಿ ಪರೀಕ್ಷಿಸಿದರು.

# ಆಕಾಶವಾಣಿ ಸಂಗೀತ ಸಮ್ಮೇಳನ ನ.29ಕ್ಕೆ







■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಸಾರ ಭಾರತಿ ಹಾಗೂ ಕೇಂದ್ರ ಸಂಸ್ಕೃತಿ ಸಚಿವಾಲಯ ಪ್ರಸ್ತುತಪಡಿಸುವ ಆಕಾಶವಾಣಿಯ 67ನೇ ಸಂಗೀತ ಸಮ್ಮೇಳನ–2025ನ್ನು ನ. 29ರಂದು ಸಂಜೆ 5.45ಕ್ಕೆ ನಗರದ 'ಸೃಜನಾ' ಅಣ್ಣಾಜಿರಾವ ಸಿರೂರ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಆಕಾಶವಾಣಿ ಮಹಾ ನಿರ್ದೇಶಕರ ನಿರ್ದೇಶನದನ್ವಯ ಮೂರು ಸಂಗೀತ ಕಛೇರಿಗಳು ನಡೆಯಲಿವೆ ಎಂದು ಆಕಾಶವಾಣಿ ಧಾರವಾಡ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಶರಣಬಸವ ಚೋಳಿನ ತಿಳಿಸಿದ್ದಾರೆ.

ಖ್ಯಾತ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತಗಾರ, ಆಕಾಶವಾಣಿಯ ಉನ್ನತ ಶ್ರೇಣಿ ಕಲಾವಿದ ಪಂ. ಸೋಮನಾಥ ಮರಡೂರ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಆಕಾಶವಾಣಿ ಸಂಗೀತ ಸಮ್ಮೇಳನಕ್ಕೆ ಚಾಲನೆ ನೀಡಲಿದ್ದಾರೆ.

ಜನಪದ ಸಂಗೀತ ವಿಭಾಗದಲ್ಲಿ ಬೆಳಗಾವಿ ಜಿಲ್ಲೆ ಗೋಕಾಕ ತಾಲೂಕು ಕಲ್ಲೊಳ್ಳಿಯ ಮಹಾಂತೇಶ ಹೂಗಾರ ಹಾಗೂ ತಂಡದ ಕಲಾವಿದರು ಸಂಬಾಳ ವಾದನವನ್ನು ಪ್ರಸ್ತುತಪಡಿಸಲಿದ್ದಾರೆ. ಶಾಸ್ತ್ರೀಯ ವಾದ್ಯ ಸಂಗೀತ ವಿಭಾಗದಲ್ಲಿ ಪುಣೆಯ ಪಂ. ಭೀಮಣ್ಣ ಜಾಧವ ಅವರ ಸುಂದರಿ ವಾದನ ಪ್ರಸ್ತುತಪಡಿಸಲಿದ್ದಾರೆ. ಪಂ. ರವಿಕಿರಣ ನಾಕೋಡ ತಬಲಾ ಸಾಥ್ ನೀಡಲಿದ್ದಾರೆ.

ಕನ್ನಡ ಲಘು ಶಾಸ್ತ್ರೀಯ ಸಂಗೀತ ವಿಭಾಗದಲ್ಲಿ, ರಾಯಚೂರು ಜಿಲ್ಲೆ ದೇವದುರ್ಗದ ವೆಂಕಟೇಶ ಅಲ್ಕೋಡ ಹಾಗೂ ಉತ್ತರಕನ್ನಡ ಜಿಲ್ಲೆ ಶಿರಸಿಯ ಆರಾಧನಾ ಹೆಗಡೆ ಗಾಯನ ಕಛೇರಿ ನಡೆಸಿಕೊಡಲಿದ್ದಾರೆ. ಪಂ. ಸಾತಲಿಂಗಪ್ಪ ದೇಸಾಯಿ ಕಲ್ಲೂರ ತಬಲಾ ಸಾಥ್ ನೀಡಲಿದ್ದು, ರಾಮಚಂದ್ರ ಉಪ್ಪಾರ ಕೀಬೋರ್ಡ್ ನುಡಿಸಲಿದ್ದಾರೆ.

ಆಕಾಶವಾಣಿ ಧಾರವಾಡ ಕೇಂದ್ರದ ತಾಂತ್ರಿಕ ವಿಭಾಗದ ಮುಖ್ಯಸ್ಥರಾದ ಅರುಣ ಪ್ರಭಾಕರ ಸೇರಿದಂತೆ ವಿಶೇಷ ಆಹ್ವಾನಿತರು, ಸಂಗೀತ ಕ್ಷೇತ್ರದ ಸಾಧಕರು, ವಿವಿಧ ಕ್ಷೇತ್ರಗಳ ಗಣ್ಯರು ಆಕಾಶವಾಣಿ ಸಂಗೀತ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ. ಸರಿಯಾದ ಸಮಯಕ್ಕೆ ಕಾರ್ಯಕ್ರಮ ಆರಂಭವಾಗಲಿದ್ದು, ಆಕಾಶವಾಣಿ ಧಾರವಾಡ ಕೇಂದ್ರದ ಕಾರ್ಯಕ್ರಮ ನಿರ್ವಾಹಕಿ ಮಂಜುಳಾ ಪುರಾಣಿಕ ಹಾಗೂ ಆಕಾಶವಾಣಿಯ ನಿಲಯ ಕಲಾವಿದ, ಸಿತಾರ ವಾದಕ ಉಸ್ತಾದ್ ಶಫೀಕ್ ಖಾನ್ ಸರ್ವರಿಗೂ ಆದರದ ಸ್ವಾಗತ ಕೋರಿದ್ದಾರೆ.

# ಉಚಿತ ನೇತ್ರ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪಂಚಾಕ್ಷರಿ ನಗರದಲ್ಲಿ ಜ್ಞಾನವಿಕಾಸ ಕೇಂದ್ರದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ವಿರೇಂದ್ರ ಹೆಗ್ಗಡೆ ಅವರ 78ನೇ ಜನ್ಮದಿನದ ಪ್ರಯುಕ್ತ ಉಚಿತ ನೇತ್ರ ತಪಾಸಣಾ ಶಿಬಿರ ಜರುಗಿತು.

ಕಾರ್ಯಕ್ರಮವನ್ನು ತಾಲೂಕಿನ ಯೋಜನಾಧಿಕಾರಿ ಉಮಾ ಉದ್ಘಾಟಿಸಿದರು. ಡಾ. ಸುವರ್ಣ ನಿಡುಗುಂದಿ ಅವರು ಸದಸ್ಯರಿಗೆ ಆರೋಗ್ಯದ ಬಗ್ಗೆ ಗಮನಹರಿಸುವುದರ ಬಗ್ಗೆ ಮಾಹಿತಿಯನ್ನು ನೀಡಿದರು. ಡಾ.



ಮಹಾಂತೇಶ ಚಪ್ಪನಮಠ ಅವರು ಕಣ್ಣುಗಳ ಸಂರಕ್ಷಣೆಯಲ್ಲಿ ನಮ್ಮ ಆಹಾರ ಪದ್ಧತಿ ಹೇಗೆ ಇರಬೇಕು ಎಂದು ಮಾಹಿತಿ ನೀಡಿದರು.

ರೋಟರಿ ಕ್ಲಬ್ ಅಧ್ಯಕ್ಷ ಶ್ರೀಧರ ಸುಲ್ತಾನಪುರ ಹಾಗೂ ಕಾರ್ಯದರ್ಶಿ ಸುರೇಶ ಕುಂಬಾರ, ಈಶ್ವರ ದೇವಸ್ಥಾನ ಕಮಿಟಿಯ ಸದಸ್ಯರಾದ ಮಲ್ಲಿಕಾರ್ಜುನ ಸಂತೋಜಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ 99 ಜನರಿಗೆ ಉಚಿತ ನೇತ್ರ ತಪಾಸಣೆ ಮಾಡಿ ರೋಟರಿ ಕ್ಲಬ್ ವತಿಯಿಂದ ಕೆಲವು ಸದಸ್ಯರಿಗೆ ಉಚಿತ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಣಿಶ್ರೀ ಸಲ್ಲಪಟ್ಟಿ ವಹಿಸಿದ್ದರು. ವಲಯದ ಮೇಲ್ವಿಚಾರಕಿ ಶಿಲ್ಪಾ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಗಂಗಮ್ಮ, ಸೇವಾ ಪ್ರತಿನಿಧಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಡಿ. 13 ರಂದು ರಾಷ್ಟ್ರೀಯ ಲೋಕ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಡಿ.13 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ನಾಗವೇಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಆಧಾರ್ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೃಷ್ಟಿ ದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆ, ಸಾಧನೆ ಸಲಕರಣೆಗಳ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆ, ಪ್ರತಿಭೆ ಯೋಜನೆ ಸೇರಿದಂತೆ ಒಟ್ಟು 13 ಯೋಜನೆಗಳ ಬಗ್ಗೆ ಗ್ರಾಮ ಸಭೆಗಳಲ್ಲಿ, ಜನ ಪ್ರತಿನಿಧಿಗಳ ಸಭೆಗಳಲ್ಲಿ ಅರಿವು ಮೂಡಿಸಲು ಕೋರಲಾಗಿದೆ ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ತಿಳಿಸಿದ್ದಾರೆ.

## ದೇಶದಲ್ಲಿರುವ ಸಂವಿಧಾನ ವಿರೋಧಿ ಮನುವಾದಿಗಳನ್ನು ಗುರುತಿಸಿ: ಸಿಎಂ ಕರೆ

■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗದ

ಪೋಕ್ಸೋ ಪ್ರಕರಣದಲ್ಲಿ ಚಿತ್ರದುರ್ಗದ ಮುರುಘಾ ಮಠದ ಶಿವಮೂರ್ತಿ ಮುರುಘಾ ಶರಣ ಸೇರಿದಂತೆ ಐವರನ್ನು ಖುಲಾಸೆಗೊಳಿಸಿ ಚಿತ್ರದುರ್ಗದ ಜಿಲ್ಲಾ ನ್ಯಾಯಾಲಯ ಬುಧವಾರ (ನವೆಂಬರ್ 26) ತೀರ್ಪು ನೀಡಿದೆ ಎಂದು ಬಾರ್ & ಬೆಂಚ್ ವರದಿ ಮಾಡಿದೆ.ಶಿವಮೂರ್ತಿ ಮುರುಘಾ ಶರಣ ವಿರುದ್ಧ ಎರಡು ಪೋಕ್ಸೋ ಪ್ರಕರಣಗಳು ದಾಖಲಾಗಿತ್ತು. ಒಂದು ಪ್ರಕರಣದಲ್ಲಿ ಈಗ ಖುಲಾಸೆಗೊಂಡಿದ್ದಾರೆ.

**ಅತಿಥಿ ಉಪನ್ಯಾಸಕರ 3ನೇ ದಿನದ ಹೋರಾಟದಲ್ಲಿ ಡಾ. ಹನುಮಂತಗೌಡ ಆರ್.ಕಲ್ಮನಿ**

# ಸ್ಪಂದನೆ ಇಲ್ಲದಿದ್ದರೆ ದಯಾಮರಣಕ್ಕೂ ಸಿದ್ಧ

■ವಿಜಯಸಾಕ್ಷಿ ಸುದ್ದಿ, ಗದಗ




ಹಲವು ವರ್ಷಗಳ ಕಾಲ ನಿರಂತರವಾಗಿ ವಿದ್ಯಾರ್ಥಿಗಳಿಗೆ ಜ್ಞಾನದಾಸೋಹ ಮಾಡಿರುವ ಅತಿಥಿ ಉಪನ್ಯಾಸಕರ ಯುಜಿಸಿ ಹಾಗೂ ನಾನ್ ಯುಜಿಸಿ ಎಂಬ ವ್ಯತ್ಯಾಸ ಮರೆತು ಸರಕಾರ ತಕ್ಷಣವೇ ಕೌನ್ಸೆಲಿಂಗ್ ನಿಲ್ಲಿಸಬೇಕು. ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಮುಂದುವರಿಸಬೇಕು, ಉಳಿದ ಬೋಧನಾ ಕಾರ್ಯಭಾರಕ್ಕಾಗಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸಿ ಹೊರಗುಳಿದ ಅತಿಥಿ ಉಪನ್ಯಾಸಕರುಗಳಿಗೆ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲು ಮುಂದಾಗಬೇಕು. ಮಾನವೀಯತೆಯ ಆಧಾರದ ಮೇಲೆ ಆದ್ಯತೆ ನೀಡಿ ಸೇವಾ ಭದ್ರತೆ ಸೇವಾ ವಿಲೀನತೆಗೆ ಮುಂದಾಗದೆ ಇದ್ದರೆ ದಯಾಮರಣಕ್ಕೂ ಸಿದ್ಧರಾಗಿದ್ದೇವೆ ಎಂದು ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನಮಂತಗೌಡ ಕಲ್ಮನಿ ಹೇಳಿದರು.

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳಿಗಾಗಿ ಆಗ್ರಹಿಸಿ ಹಾಗೂ ಉನ್ನತ ಶಿಕ್ಷಣ ಇಲಾಖೆಯ ದ್ವಂದ್ವ ನಿಲುವುಗಳನ್ನು ಖಂಡಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಹಿರಿಯ ಉಪನ್ಯಾಸಕಿ ದೊಡ್ಡಬಸಮ್ಮ ಮಾತನಾಡಿ, 2000ದಿಂದ 20 ವರ್ಷಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸುತ್ತಾ ಬಂದಿರುವ ನನ್ನ ಕೈಯಲ್ಲಿ ಶಿಕ್ಷಣ ಪಡೆದವರು ಜಿಲ್ಲಾಧಿಕಾರಿ, ತಹಸೀಲ್ದಾರರು ಸೇರಿದಂತೆ ವಿವಿಧ ಉನ್ನತ ಹುದ್ದೆಗಳಲ್ಲಿದ್ದಾರೆ. ಮಕ್ಕಳ ಭವಿಷ್ಯ ಕಟ್ಟುತ್ತಾ ಬಂದಿರುವ ನಮ್ಮ ಮಕ್ಕಳ ಮತ್ತು ನಮ್ಮ ಭವಿಷ್ಯವೇ ಬೀದಿಗೆ ಬಂದಿದೆ. ನಮಗೂ ಅವಕಾಶ ನೀಡಿ ಸರಕಾರ ನಮ್ಮ ಬೆಂಬಲಕ್ಕೆ ನಿಲ್ಲಬೇಕು ಎಂದು ಹೇಳಿದರು.

ಮಂಗಳವಾರ ಅಪಘಾತದಲ್ಲಿ ನಿಧನರಾದ ದಕ್ಷ ಅಧಿಕಾರಿ ಮಹಾಂತೇಶ ಬೀಳಗಿಯವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮನಮೋಹನ, ಸುರೇಶ, ಅನಿಲ ಹಾರೂಗೇರಿ, ಎನ್.ಬಿ. ಬಡಿಗೇರ, ದಾನೇಶ್ವರಿ, ಪಾರ್ವತಿ ತಾರಿಹಾಳ, ಸರಸ್ವತಿ, ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ಶಶಿಕಲಾ ಜೋಳದ, ಅಮೃತ್, ದೇಸಾಯಿಗೌಡರ, ಡಾ. ವಿ.ಡಿ. ಮುಳಗುಂದ, ಭಗತ್‌ಸಿಂಗ ನವಲಕೂರ, ಡಾ. ಚಂದ್ರಕಾಂತ ಶಿರೋಳೆ ಸೇರಿದಂತೆ ಬೀದರ, ಗುಲಬುರ್ಗಾ, ಕಾರವಾರ, ಧಾರವಾಡ, ಬಾಗಲಕೋಟೆ, ವಿಜಯನಗರ, ಬಳ್ಳಾರಿ, ಹಾವೇರಿ, ತುಮಕೂರ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಅತಿಥಿ ಉಪನ್ಯಾಸಕರು ಮತ್ತು ಮಹಿಳಾ ಉಪನ್ಯಾಸಕರು ಇದ್ದರು.

ಬೀದರ ಜಿಲ್ಲೆಯ ಅನಿಲಕುಮಾರ ಸಿಂಧೆ ಮಾತನಾಡಿ, ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಮುಂದುರೆಸಬೇಕು. ಉಳಿದ ಭೋದನಾ ಕಾರ್ಯಭಾರಕ್ಕೆ ಕೌನ್ಸೆಲಿಂಗ್ ನಡೆಯಲಿ. 2009ರಲ್ಲಿ ಪೂರ್ಣಗೊಳಿಸಿರುವ ಎಂಪಿಲ್ ಹೊಂದಿದರಿಗೂ ಅವಕಾಶ ನೀಡಿ ಮತ್ತು ಭದ್ರತೆಯನ್ನು ನೀಡಬೇಕೆಂದು ಹೇಳಿದರು.

**ಪಾಲಾ–ಬಾದಾಮಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದ ಅನ್ನದಾತರು**

# ರೈತರ ಹೆಸರಲ್ಲಿ ರಾಜಕೀಯ ಮಾಡದಿರಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಗದಗ ಜಿಲ್ಲೆಯಾದ್ಯಂತ ಬೆಂಬಲ ಬೆಲೆಯಡಿ ಗೋವಿನಜೋಳ ಖರೀದಿ ಕೇಂದ್ರ ಪ್ರಾರಂಭಿಸುವಂತೆ ಆಗ್ರಹಿಸಿ ಸ್ಥಳೀಯ ರೈತ ಸಂಘದಿಂದ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ಗದಗ–ಲಕ್ಷ್ಮೇಶ್ವರ ಸಂಪರ್ಕ ಕಲ್ಪಿಸುವ ಪಾಲಾ–ಬಾದಾಮಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರದ ಮೇಲೆ ಕೇಂದ್ರ ಸರ್ಕಾರ, ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರ ಬೊಟ್ಟು ಮಾಡಿ ತೋರಿಸುವುದು, ರಾಜಕೀಯ ಮಾಡುವುದನ್ನು ಬಿಡಬೇಕು. ಗ್ಯಾರಂಟಿ ಯೋಜನೆಗಳನ್ನು ನೀಡಿ, ಅದನ್ನ ಭರಿಸಲು ರೈತ–ರಿಂದ, ಸಾಮಾನ್ಯ ಜನರಿಂದ ಸುಲಿಗೆ ಮಾಡುತ್ತಿದ್ದಾರೆ. ರೈತರನ್ನು ದೇಶದ ಬೆನ್ನೆಲುಬು ಎಂದು ಹೇಳಿಕೊಂಡು ರೈತರ ಬೆನ್ನೆಲುಬನ್ನು ಮುರಿಯುವ ಕೆಲಸವನ್ನು ಮಾಡುತ್ತಿದ್ದಾರೆ. ರೈತರು ಬೆಳೆಯುವುದನ್ನು ಬಿಟ್ಟರೆ ನೀವೆಲ್ಲ ಮಣ್ಣು ತಿನ್ನಬೇಕಾಗುತ್ತೆ ಎಂದು ಪ್ರತಿಭಟನಾ ನಿರತರು ಆಕ್ರೋಶ ವ್ಯಕ್ತಪಡಿಸಿದರಲ್ಲದೆ, ಕಾಲಹರಣ ಮಾಡದೇ ಇನ್ನು 7 ದಿನಗಳೊಳಗಾಗಿ ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸದಿದ್ದರೆ ಅಹೋರಾತ್ರಿ ಧರಣಿ ಸತ್ಯಾಗ್ರಹ ಮಾಡುತ್ತೇವೆ ಎಂದು ಎಚ್ಚರಿಸಿದರು.

ಸ್ಥಳಕ್ಕೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ ಆಗಮಿಸಿ, ಪ್ರತಿಭಟನಾಕಾರರ ಮನವಿ ಸ್ವೀಕರಿಸಿ ಮುಂದಿನ ಕ್ರಮಕ್ಕೆ ಮೇಲಾಧಿಕಾರಿಗಳಿಗೆ ತಿಳಿಸುತ್ತೇನೆ, ಪ್ರತಿಭಟನೆ ಹಿಂಪಡೆಯಿರಿ ಎಂದಾಗ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಬರುವವರೆಗೂ ನಮ್ಮ ಪ್ರತಿಭಟನೆಯನ್ನು ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದರು.

ನಂತರ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಮನವಿ ಸ್ವೀಕರಿಸಿ, ಈ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಆದಷ್ಟು ಬೇಗ ಬೆಂಬಲ ಬೆಲೆಯಡಿ ಖರೀದಿ ಕೇಂದ್ರ ಪ್ರಾರಂಭಿಸಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ಈ ವೇಳೆ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು. ಗದಗ ಡಿವಾಯ್‌ಎಸ್‌ಪಿ ಮುರ್ತುಜಾ ಖಾದ್ರಿ, ಗದಗ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಇ.ಓ. ಮಲ್ಲಯ್ಯ ಕೊರಣ್ಣವರ ಇತರರು ಇದ್ದರು.

ರೈತರು ಬೆಳೆದ ಪ್ರತಿ ಬೆಳೆಗೂ ಸರಿಯಾದ ಬೆಲೆ ಇಲ್ಲ. ರೈತರು ಪ್ರತಿಯೊಂದನ್ನು ಪಡೆಯಬೇಕಾದರೂ ಹೋರಾಟ ಮಾಡಬೇಕಾಗಿರುವುದು ಅನಿವಾರ್ಯವಾಗಿದೆ. ಮಾರುಕಟ್ಟೆಯಲ್ಲಿ ಗೋವಿನಜೋಳವನ್ನ 1500–1600 ರೂ/ಕ್ವಿಂ ಖರೀದಿಸುತ್ತಿದ್ದಾರೆ. ಇದು ರೈತರಿಗೆ ತುಂಬಲಾರದ ನಷ್ಟವಾಗಿದೆ. ರಾಜ್ಯ ಸರ್ಕಾರ ಎಂಎಸ್‌ಪಿ ಮಾರ್ಗಸೂಚಿ ಅನ್ವಯ ಕನಿಷ್ಟ 2400 ಹಾಗೂ ರಾಜ್ಯ ಸರ್ಕಾರ 600 ರೂ ಗಳೊಂದಿಗೆ 1 ಕ್ವಿಂ.ಗೆ 3 ಸಾವಿರ ರೂ.ನಂತೆ ಖರೀದಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

# ಸಂವಿಧಾನ ದಿನಾಚರಣೆಯ ಜಾಗೃತಿ ಜಾಥಾ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ತೇರಿನ ಮನೆ ಹತ್ತಿರ ಸರಕಾರದ ವಿವಿಧ ಇಲಾಖೆಗಳು ಹಾಗೂ ಸಂಘಟನೆಗಳ ನೇತೃತ್ವದಲ್ಲಿ ಸಂವಿಧಾನ ದಿನಾಚರಣೆ ಜಾಗೃತಿ ಜಾಥಾ ಯಶಸ್ವಿಯಾಗಿ ನೆರವೇರಿತು.

ತಹಸೀಲ್ದಾರ ಧನಂಜಯ ಎಂ ಅವರು ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರ ಮತ್ತು ಸಂವಿಧಾನ ಪೀಠಿಕೆಗೆ ಪೂಜೆ ಸಲ್ಲಿಸಿ ಜಾಥಾಕ್ಕೆ ಚಾಲನೆ ನೀಡಿದರು. ವಿವಿಧ ಶಾಲಾ–ಕಾಲೇಜುಗಳ ಸಾವಿರಾರು ವಿದ್ಯಾರ್ಥಿಗಳು ನಮ್ಮ ಹೆಮ್ಮೆಯ ಸಂವಿಧಾನಕ್ಕೆ ಜಯವಾಗಲಿ, ವಿಶ್ವಕ್ಕೆ ಮಹತ್ವದ ಕೊಡುಗೆ ನೀಡಿದ ಭಾರತರತ್ನ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಜಯವಾಗಲಿ ಇತ್ಯಾದಿ ಘೋಷಣೆಗಳನ್ನು ಮೊಳಗಿಸುತ್ತಾ ಸಾಗಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಕೃಷ್ಣಪ್ಪ ಧರ್ಮರ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಪಿಎಸ್‌ಐ ನಾಗರಾಜ್ ಗಡಾದ, ಕೃಷಿ ಅಧಿಕಾರಿ ಚಂದ್ರಶೇಖರ್ ನರಸಮ್ಮನವರ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ರಾಮಪ್ಪ ಗಡದವರ, ರಮೇಶ್ ಅಡುಗೆಮನೆ, ಬಸವಣ್ಣೆಪ್ಪ ನಂದೆಣ್ಣವರ, ಫಕ್ಕೀರಪ್ಪ ಬಜಕ್ಕನವರ, ಸೋಮಣ್ಣ ಯತ್ತಿನಹಳ್ಳಿ, ಅನಿಲ ನಂದೆಣ್ಣವರ, ಅನಿಲ ಮುಳಗುಂದ, ಹನುಮಂತಪ್ಪ ನಂದೆಣ್ಣವರ, ನಾಗರಾಜ್ ಮಡಿವಾಳರ, ರಾಮಣ್ಣ ಲಮಾಣಿ (ಶಿಗ್ಲಿ), ಪ್ರಶಾಂತ್ ಖಿಮಾಯಿ, ಅಮರೀಶ್ ತೆಂಬದಮನಿ, ಗಾಳೆಪ್ಪ ಹರಿಜನ, ಮಾರ್ತಾಂಡಪ್ಪ ಗಾಳೆಪ್ಪನವರ, ಮಹಾಂತೇಶ್ ಮುಶೆಪ್ಪನವರ, ಮಂಜುಳಾ ಹೂಗಾರ್, ನೇತ್ರಾವತಿ ಹೊಸಮನಿ, ಫಕ್ಕೀರೇಶ ನಂದೆಣ್ಣವರ, ಸದಾನಂದ ನಂದೆಣ್ಣವರ್, ಹೊನ್ನಪ್ಪ ಸಂಜೀವಣ್ಣವರ್, ಈಶ್ವರ್ ಮೆಡ್ಲೇರಿ, ಉಮೇಶ ನೇಕಾರ, ಎನ್.ಎ. ಮುಲ್ಲಾ, ಕೆ.ಓ. ಹೂಲಿಕಟ್ಟಿ ಹಾಗೂ ಶಾಲಾ–ಕಾಲೇಜುಗಳ ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಂವಿಧಾನ ನಮ್ಮೆಲ್ಲರ ಭರವಸೆಯಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

1948ರಲ್ಲಿ ಡಾ. ಬಿ.ಆರ್. ಅಂಬೇಡ್ಕರ ನೇತೃತ್ವದ ಸಮಿತಿ ಸಂವಿಧಾನ ಕರಡನ್ನು ಪೂರ್ಣಗೊಳಿಸಿ ಸಂವಿಧಾನ ಸಭೆಯಲ್ಲಿ ಮಂಡಿಸಿತು. 1949 ನವೆಂಬರ್ 26ರಂದು ಸರ್ಕಾರ ಅಂಗೀಕರಿಸಿತು. ಅದರ ನೆನಪಿಗಾಗಿ ಪ್ರತಿ ವರ್ಷ ಸಂವಿಧಾನ ದಿನಾಚರಣೆಯನ್ನು ಆಚರಿಸಿಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಾರ್ಯಾಧಕ್ಷ ಸಿದ್ದಪ್ಪ ಲಿಂಗದಾಳ ಹೇಳಿದರು.

ಬುಧವಾರ ಗದಗ ತಾಲೂಕಾ ಆರೋಗ್ಯಾಧಿಕಾರಿಗಳ ಕಾಂ ರ್ಯಾಲಂ ದಲ್ಲಿ ಏರ್ಪಡಿಸಲಾಗಿದ್ದ ಭಾರತ ಸಂವಿಧಾನದ ದಿನಾಚರಣೆಯ ಸಂಮಾರಂಭದಲ್ಲಿ ಅವರು ಮಾತನಾಡಿದರು.

ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಗಡಾದ ಮಾತನಾಡಿ, ನ್ಯಾಯ, ಸ್ವಾತಂತ್ರ್ಯ, ಸಮಾನತೆ ಸಂವಿಧಾನ ನೀಡಿರುವ ಅಮೂಲ್ಯ ಕೊಡುಗೆಗಳಾಗಿದ್ದು, ಭಾರತದ ಶಕ್ತಿ ಸಂವಿಧಾನದಲ್ಲಿದೆ. ಭವ್ಯವಾದ ರಾಷ್ಟ್ರ ನಿರ್ಮಿಸಲು ಸಂವಿಧಾನವನ್ನು ಗೌರವಿಸೋಣ ಮತ್ತು ಪಾಲಿಸೋಣ ಎಂದು ಹೇಳಿ ಸಂವಿಧಾನ ಪೀಠಿಕೆಯ ಪ್ರತಿಜ್ಞಾವಿಧಿ ಬೋಧಿಸಿದರು.

ಸಮಾರಂಭದ ಅದ್ಯಕ್ಷತೆ ವಹಿಸಿದ ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ನಾವು ನಮ್ಮ ಜವಾಬ್ದಾರಿ ಮತ್ತು ಕರ್ತವ್ಯಗಳ ಪಾಲನೆಯೊಂದಿಗೆ ಹೆಮ್ಮೆಯ ಪ್ರಜೆಗಳಾಗಿ ಸಂವಿಧಾನಕ್ಕೆ ಗೌರವ ನೀಡುವ ಮೂಲಕ ಸಂವಿಧಾನದ ಆಶಯದಲ್ಲಿ ಮುನ್ನಡೆಯೋಣ ಎಂದರು.

ಪುಷ್ಪಾವತಿ ಮಡಿವಾಳರ ಪ್ರಾರ್ಥಿಸಿದರು, ಗುಡದಪ್ಪ ಜಗ್ಗಿನ ಸ್ವಾಗತಿಸಿದರು. ಬೂದೇಶ ಶಿದ್ದನಗೌಡರ ನಿರೂಪಿಸಿದರು. ಸಲ್ಮಾನ ಸಾಂತಗೇರಿ ವಂದಿಸಿದರು. ಕಾರ್ಯಕ್ರಮದಲ್ಲಿ ಆರ್.ಬಿ.ಎಸ್ .ಕೆ ವೈದ್ಯಾಧಿಕಾರಿಗಳಾದ ಡಾ. ಜಯಕುಮಾರ ಬ್ಯಾಳಿ, ಡಾ. ಅಶ್ವಿನಿ, ಸರೋಜಾ ಕಟ್ಟಿಮನಿ, ವಾಯ್. ಎನ್. ಕಡೆಮನಿ, ಬಿ.ಎಸ್. ಹಿರೇಹಾಳ ಮುಂತಾದವರು ಪಾಲ್ಗೊಂಡಿದ್ದರು.

# ಪದವೀಧರ ಮತದಾರರ ಕರಡು ಪಟ್ಟಿ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಮತದಾರರ ಕರಡು ಪಟ್ಟಿಯ ನಮೂನೆ–5ನ್ನು ಪ್ರಕಟಿಸಿದ್ದು, ಮತಗಟ್ಟೆ ಸಂಖ್ಯೆ 75 ಮತ್ತು 77ರ ಕರಡು ಮತದಾರರ ಪಟ್ಟಿಗಳಿಗೆ ಸಂಬಂಧಪಟ್ಟಂತೆ ಪ್ರಾದೇಶಿಕ ಆಯುಕ್ತರು ಬೆಳಗಾವಿ ಇವರು 25–11–2025ರಂದು ಹೊರಡಿಸಿದ ನಮೂನೆ–5ನ್ನು (ಶಿರಹಟ್ಟಿ ತಾಲೂಕಿಗೆ ಸಂಬಂಧಿಸಿದಂತೆ) ಸಾರ್ವಜನಿಕರ ಮಾಹಿತಿಗಾಗಿ ಕಾರ್ಯಾಲಯದ ಸೂಚನಾ ಫಲಕಕ್ಕೆ ನ.25ರಂದು ಪ್ರಕಟಿಸಲಾಗಿದೆ ಎಂದು ತಹಸೀಲ್ದಾರ ರಾಘವೇಂದ್ರರಾವ್‌ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ತಹಸೀಲ್ದಾರ ಧನಂಜಯ ಎಂ ಅಭಿಪ್ರಾಯ**

# ಸಂವಿಧಾನದಲ್ಲಿ ಜೀವನದ ಮೌಲ್ಯಗಳು ಅಡಕವಾಗಿವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಜಗತ್ತಿನಲ್ಲಿ ಭಾರತವು ಅತ್ಯಂತ ಶ್ರೇಷ್ಠ ಸಂವಿಧಾನ ಹೊಂದಿದ ರಾಷ್ಟ್ರವಾಗಿದೆ. ದೇಶದ ಕಟ್ಟಕಡೆಯ ವ್ಯಕ್ತಿಗೂ ನೆಮ್ಮದಿಯ ಬದುಕು ನೀಡಲು ಸಂವಿಧಾನದಿಂದ ಸಾಧ್ಯವಾಗಿದ್ದು, ಭಾರತದ ಪ್ರತಿಯೊಬ್ಬ ಪ್ರಜೆಯು ಸಂವಿಧಾನವನ್ನು ಅರಿತುಕೊಳ್ಳುವದರ ಜೊತೆಗೆ ಅದನ್ನು ಗೌರವಿಸಬೇಕು ಎಂದು ತಹಸೀಲ್ದಾರ ಧನಂಜಯ ಎಂ ಅಭಿಪ್ರಾಯಪಟ್ಟರು.

ಅವರು ಬುಧವಾರ ಪಟ್ಟಣದ ಚನ್ನಮ್ಮನ ವನ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತ, ತಾ.ಪಂ, ಸಮಾಜಕಲ್ಯಾಣ ಇಲಾಖೆ, ಪುರಸಭೆ, ಪ.ಜಾ/ಪ.ಪಂ ಹಾಗೂ ಇತರೆ ವಿವಿಧ ಒಕ್ಕೂಟಗಳ ಸಂಯುಕ್ತಾಶ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಸಂವಿಧಾನದ ಪೀಠಿಕೆಯಲ್ಲಿ ನಮ್ಮ ದೇಶದ ಪ್ರಜಾಪ್ರಭುತ್ವದ ಹಿರಿಮೆ, ಶಕ್ತಿ ಹಾಗೂ ಅದರ ಶ್ರೇಷ್ಠ ಗುಣಗಳು ಅಡಗಿವೆ. ಸರ್ವಧರ್ಮಗಳಿಗೂ ಸಮಭಾವ ಎಂಬ ಸದಾಶಯ ಸಂವಿದಾನದ ಮುಖ್ಯ ಧ್ಯೇಯವಾಗಿದೆ. ಸಂವಿಧಾನದಲ್ಲಿ ಜೀವನದ ಮೌಲ್ಯಗಳು ಅಡಕವಾಗಿವೆ ಎಂದು ಹೇಳಿದರು.

ಉಪನ್ಯಾಸ ನೀಡಿದ ಹಿರಿಯ ಸಾಹಿತಿ ಸಿ.ಜಿ. ಹಿರೇಮಠ ಮಾತನಾಡಿ, ನಮ್ಮ ದೇಶ ಜಾತ್ಯಾತೀತ ರಾಷ್ಟ್ರವಾಗಲು ಸಂವಿಧಾನವೇ ಕಾರಣ. ಸಮಾಜದಲ್ಲಿ ತುಳಿತಕ್ಕೊಗಾದವರನ್ನು ರಕ್ಷಿಸಲೆಂದೇ ಸಂವಿಧಾನ ರಚನೆಯಾಗಿದೆ. ಇಷ್ಟೆಲ್ಲ ಇದ್ದರೂ ಸಹ ಇನ್ನೂ ಶೋಷಣೆ ತಪ್ಪಿಲ್ಲ ಎಂದು ಹೇಳಿದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ನಾಗರಾಜ ಚಿಂಚಲಿ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಸ್. ಸಂಕನೂರ, ಈಶ್ವರ ಮೆಡ್ಲೇರಿ, ಗಿರೀಶ ನೇಕಾರ, ತಾಲೂಕಾ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಸೇರಿದಂತೆ ಅನೇಕರು ವೇದಿಕೆಯಲ್ಲಿದ್ದರು.

ಹರ್ಲಾಪುರ ಸಾಂಬಯ್ಯ ಹಿರೇಮಠ ತಂಡದವರು ನಾಡಗೀತೆ ಮತ್ತು ರೈತಗೀತೆಗಳನ್ನು ಪ್ರಸ್ತುತಪಡಿಸಿದರು. ಎನ್‌ಎಸ್‌ಎಸ್, ಎನ್‌ಸಿಸಿ, ಸ್ಕೌಟ್ & ಗೈಡ್ಸ್ ವಿದ್ಯಾರ್ಥಿಗಳು, ವಿವಿಧ ಶಾಲಾ–ಕಾಲೇಜಿನ ನೂರಾರು ವಿದ್ಯಾರ್ಥಿಗಳು ಬಾಗವಹಿಸಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪಿಎಸ್‌ಐ ನಾಗರಾಜ ಗಡಾದ, ಸಂವಿಧಾನದಲ್ಲಿ ಪ್ರತಿಯೊಬ್ಬ ನಾಗರಿಕರ ಮೌಲ್ಯಗಳು, ಸಾಮಾಜಿಕ, ಆರ್ಥಿಕ, ನಂಬಿಕೆ ಮತ್ತು ಶ್ರದ್ಧೆ, ಪೂಜಿಸುವ ಹಕ್ಕು ಮತ್ತು ಮೂಲಭೂತ ಹಕ್ಕುಗಳ ಬಗ್ಗೆ ಮಾಹಿತಿ ನೀಡಲಾಗಿದೆ. 22 ಸಮಿತಿಗಳಿಂದ ಸಂವಿಧಾನ ರಚನೆಯಾಗಿದೆ. ಅದರಲ್ಲಿ ಕರಡು ಸಮಿತಿ ಮುಖ್ಯವಾಗಿತ್ತು. ಇದರ ಅಧ್ಯಕ್ಷರು ಬಾಬಾಸಾಹೇಬ ಅಂಬೇಡ್ಕರ್ ಆಗಿದ್ದರು. ಅವರು ನೀಡಿದ ಸಂವಿಧಾನ ಜಗತ್ತಿಗೆ ಮಾದರಿಯಾಗಿದೆ ಎಂದು ಹೇಳಿದರು.

# ಎನ್.ಎಸ್.ವಿ ಪಾಕ್ಷಿಕ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಕುಟುಂಬ ಯೋಜನೆಯಲ್ಲಿ ಪುರುಷರ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆಯು ಅತಿ ಸುರಕ್ಷಿತ ಸರಳ ಮತ್ತು ಪರಿಣಾಮಕಾರಿ ಶಾಶ್ವತ ಗರ್ಭ ನಿರೋಧಕವೆಂದು ಸಾಬೀತಾಗಿದ್ದು ಇಲಾಖೆಯು ಗುರುತಿಸಲ್ಪಡುತ್ತಿರುವ ಅರ್ಹ ಪುರುಷರು ಪುರುಷ ನಿರೋಧ ಶಸ್ತ್ರ ಚಿಕಿತ್ಸೆಗೆ ಮುಂದಾಗ ಬೇಕೆಂದು ಗದಗ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್ ಗಡಾದ ಹೇಳಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಆಶ್ರಯದಲ್ಲಿ ದಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಏರ್ಪಡಿಸಿದ್ದ ಎನ್.ಎಸ್.ವಿ ಪಾಕ್ಷಿಕ 2025ರ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು. ನಂತರ ಸಾರ್ವಜನಿಕರು ಕೇಳಿದ ಅನೇಕ ಪ್ರಶ್ನೆಗಳಿಗೆ ಉತ್ತರಿಸಿದರು. ಎನ್ ಎಸ್ ವಿ ಅಂದರೆ ಪುರುಷ ಸಂತಾನ ಹರಣ ಶಸ್ತ್ರ ಚಿಕಿತ್ಸೆಯ ಬಗೆಗೆ ಇರುವ ತಪ್ಪು ಗ್ರಹಿಕೆಗಳನ್ನು ಪರಿಹರಿಸುತ್ತಾ ಕುಟುಂಬ ಯೋಜನೆಯಲ್ಲಿ ಸಮಾನ ಭಾಗವಹಿಸುವಿಕೆಯ ಮೇಲೆ ಕೇಂದ್ರೀಕರಿಸುವುದು ಅವಶ್ಯವಿರುತ್ತದೆ ಎಂದರು.

ಬೂದೇಶ್ ಸಿದ್ದನಗೌಡರ ಸ್ವಾಗತಿಸಿದರು. ಗುರುರಾಜ, ಕೊಟ್ಯಾಳ ನಿರೂಪಿಸಿದರು, ಪುಷ್ಪಾ ಮಡಿವಾಳರ. ವಂದಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಹಿರಿಯ ಆರೋಗ್ಯ ಸುರಕ್ಷತಾಧಿಕಾರಿ ಎಸ್ ಎಸ್ ಕಟ್ಟಿಮನಿ, ಶೈಲಾ ಮಳೇಕರ್ ಹಾಯ ವಿವಿಧ ತಾಲೂಕಿನ ಪ್ರಾಥಮಿಕ ಆರೋಗ್ಯ ಸುರಕ್ಷತೆ ಅಧಿಕಾರಿಗಳು ಆಶಾ ಕಾರ್ಯಕರ್ತರು ಆರೋಗ್ಯ ಇಲಾಖೆಯ ಸಿಬ್ಬಂದಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka